ಸಂಪುಟ : 9 ಸಂಚಿಕೆ 130 ಪುಟ : 4 ಬೆಲೆ: 3.00 ಬುಧವಾರ ಜೂನ್ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 130 Pages : 4 Price : 3.00 Wednesday June 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 26ರಂದು ಈ ಕೆಳಗೆ ಕಾಣಿಸಿದ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ದೊಡ್ಡ ಮಸೂತಿ ಭಾಗ 2000 , 1800 , 1600 ಮನೆಗಳ ಲೈನ್, ಬಸ್ ಸ್ಟ್ಯಾಂಡ್ ರಸ್ತೆ. ವಾರ್ಡ್ ನಂ. 5 ನರಸಾಪುರ ಆಶ್ರಯ ಕಾಲೋನಿ. ವಾರ್ಡ್ ನಂ. 35 ನೀಲಮ್ಮ ತಾಯಿ ಮಠ, ಹದ್ಲಿ ಡಾಕ್ಟರ್ ಲೈನ್, ಗಡಗಿಯವರ ಲೈನ್.

ವಾರ್ಡ್ ನಂ 33 ರಾಧಾಕೃಷ್ಣ ನಗರ ರೆಡ್ಡಿ ಖಾನಾವಳಿ ಲೈನ್, ದೇಸಾಯಿ ಡಾಕ್ಟರ್ ಲೈನ್, ಹನುಮಂತ ದೇವರ ಗುಡಿ ಲೈನ್. ವಾರ್ಡ್ ನಂ. 7 ಪಂಚ ಲಕ್ಷ್ಮಿ ಬಡಾವಣೆ ಭಾಗ -1, 2, 3, 4. ವಾರ್ಡ್ ನಂ. 16 ಹೊಂಬಳ ನಾಕಾ ಜನತಾ ಕಾಲೋನಿ. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಮೇಲಿನ ಭಾಗ ಕೆಳಗಿನ ಭಾಗ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಸ್ಪಂದನ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ಜೂನ್ 26ರ ಮದ್ಯಾಹ್ನ 3ರಿಂದ 5 ಗಂಟೆಯವರೆಗೆ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮವು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ತಾಲೂಕು ಮಟ್ಟದ ಸಾರ್ವಜನಿಕರ ಕುಂದು-ಕೊರತೆಗಳನ್ನು ಶೀಘ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ಜನಸ್ಪಂದನ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮವು ಶಾಸಕ ಡಾ.ಚಂದ್ರು ಲಮಾಣಿ ಅವರ ಉಪಸ್ಥಿತಿಯಲ್ಲಿ ನಡೆಯಲಿದೆ. ಗದಗ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಉಪಸ್ಥಿತರಿರಲಿದ್ದಾರೆ. ವಿವಿಧ ಇಲಾಖೆ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು ಸಲ್ಲಿಸಿ ಸ್ಥಳದಲ್ಲಿಯೇ ಪರಿಹಾರ ಪಡೆದುಕೊಳ್ಳಬಹುದಾಗಿದೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂರಕ್ಷಣೆ ತಂತ್ರಾಂಶದಲ್ಲಿ ತಾಂತ್ರಿಕ ದೋಷ । ಸಮಸ್ಯೆ ಪರಿಹರಸಲು ರೈತರ ಆಗ್ರಹ**

## ವಿಮೆ ಕಂತು ತುಂಬಲಾಗದ ಗೋಳು




■ವಿಜಯಸಾಕ್ಷಿ ಸುದ್ದಿ, ನರೇಗಲ್

ರೈತರು ಬೆಳೆದ ಬೆಳೆ ಪ್ರಕೃತಿ ವಿಕೋಪದಿಂದ ನಾಶವಾದರೆ ಅಥವಾ ಬೆಳೆ ಸರಿಯಾಗಿ ಬಾರದೆ ರೈತರಿಗೆ ನಷ್ಟವಾದರೆ ಸಹಾಯವಾಗಲಿ ಎಂದು ಕರ್ನಾಟಕ ರೈತ ಸುರಕ್ಷತಾ ಪ್ರಧಾನ ಮಂತ್ರಿ ಫಸಲ್ ಬೀಮಾ(ವಿಮಾ) ಯೋಜನೆ ರೂಪಿಸಲಾಗಿದೆ. ಆದರೆ, ಸಮೀಪದ ಮಾರನಬಸರಿ ಗ್ರಾ.ಪಂ ವ್ಯಾಪ್ತಿಯ ಬೂದಿಹಾಳ ಗ್ರಾಮದ ರೈತರು ತಾಂತ್ರಿಕ ಕಾರಣದಿಂದ ಬೆಳೆ ವಿಮೆ ಕಂತು ತುಂಬಲಾಗುತ್ತಿಲ್ಲ.

ನರೇಗಲ್ ಹೋಬಳಿಯ ಮುಂಗಾರಿನ ಪ್ರಮುಖ ವಾಣಿಜ್ಯ ಬೆಳೆ ಹೆಸರು ವಿಮೆ ಪಾವತಿಸಲು ಜುಲೈ 15, ಗೋವಿನ ಜೋಳ ಜುಲೈ 17 ತೊಗರಿ ಜೂ 31 ಕೊನೆಯ ದಿನಾಂಕವಾಗಿದೆ. ಆದರೆ, ಬೂದಿಹಾಳ ಗ್ರಾಮದ ರೈತರ ಬೆಳೆ ವಿಮೆ ಕಂತು ಪಾವತಿಯಾಗುತ್ತಿಲ್ಲ. ಬೆಳೆ ವಿಮೆ ತುಂಬುವ ಸಂರಕ್ಷಣೆ ತಂತ್ರಾಂಶದಲ್ಲಿ ವಿಮೆ ಪಾವತಿಸಲು ಮುಂದಾದಾಗ ರೋಣ ಮತ್ತು ಗಜೇಂದ್ರಗಡ ತಾಲೂಕಿನಲ್ಲಿ ಬೂದಿಹಾಳ ಗ್ರಾಮ ಕಾಣಸಿಗುತ್ತಿಲ್ಲ. ಇದರಿಂದಾಗಿ ಗ್ರಾಮದ ರೈತರು ಬೆಳೆ ವಿಮೆ ಪಾವತಿಸಲು ಸಾಧ್ಯವಾಗುತ್ತಿಲ್ಲ. ಹಲವು ದಿನಗಳಿಂದ ಸೇವಾ ಕೇಂದ್ರಗಳಿಗೆ ತೆರಳಿ ಪ್ರಶ್ನಿಸಿದರೂ ಯಾವುದೇ ಪ್ರಯೋಜನವಾಗಿಲ್ಲ.

ಬೂದಿಹಾಳ ಗ್ರಾಮದ ರೈತರಿಗೆ ಬೆಳೆ ವಿಮೆ ಇದ್ದೂ ಇಲ್ಲದಂತಹ ಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಗ್ರಾಮ ಒನ್, ಸಿಎಸ್‌ಸಿ ಕೇಂದ್ರದವರನ್ನು ವಿಚಾರಿಸಿದರೆ ತಾಂತ್ರಿಕ ಸಮಸ್ಯೆ ಇದೆ ಎಂದು ಉತ್ತರಿಸುತ್ತಾರೆ. ಸಮಸ್ಯೆಯನ್ನು ಸಂಬಂಧಪಟ್ಟವರು ತಕ್ಷಣವೇ ಬಗೆಹರಿಸಿ ವಿಮೆ ತುಂಬಲು ಸಹಕರಿಸಬೇಕು ಎಂದು ಗ್ರಾಮದ ರೈತರಾದ ರವಿ ಪಾಟೀಲ, ಚನ್ನಪ್ಪ ಕರಮುಡಿ, ಮುತ್ತಪ್ಪ ಚಿಗರಿ ಒತ್ತಾಯಿಸಿದ್ದಾರೆ.

ಮಾರನಬಸರಿ ಗ್ರಾ.ಪಂ ಈ ಹಿಂದೆ ರೋಣ ತಾಲೂಕಿನಲ್ಲಿತ್ತು. ಈಗ ಗಜೇಂದ್ರಗಡ ತಾಲೂಕಿಗೆ ಸೇರ್ಪಡೆಯಾಗಿದೆ. ರೈತರ ಎಫ್‌ಐಡಿ ಗಜೇಂದ್ರಗಡ ತಾಲೂಕಿಗೆ ನೋಂದಣಿಯಾಗುತ್ತಿದೆ. ಕೃಷಿ ಇಲಾಖೆಯಿಂದ ಈಗಾಗಲೇ ಎಫ್‌ಐಡಿ ಮಾಡಿಕೊಡಲಾಗುತ್ತಿದೆ. ಬೂದಿಹಾಳ ಗ್ರಾಮದ ಸಮಸ್ಯೆ ಗಮನಕ್ಕೆ ಬಂದಿದ್ದು, ವಿಮಾ ಕಂಪನಿ ಹಾಗೂ ಸಂರಕ್ಷಣಾ ತಂತ್ರಾಂಶದ ಮುಖ್ಯಸ್ಥರಿಗೆ ಸಮಸ್ಯೆಯ ಬಗ್ಗೆ ಇ-ಮೇಲ್ ಮಾಡಲಾಗಿದೆ. ಆದಷ್ಟು ಬೇಗ ಸಮಸ್ಯೆ ಪರಿಹರಿಸಲಾಗುವುದು.

– ರವೀಂದ್ರಗೌಡ ಪಾಟೀಲ.
ಕೃಷಿ ಇಲಾಖೆ ಸಹಾಯಕ ನಿರ್ದೇಶಕ, ರೋಣ.

**ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ**

# ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅವರು ಮಂಗಳವಾರ ಸಾಯಂಕಾಲ ನಗರದ ಕಾಟನ ಸೇಲ್ ಸೊಸೈಯಟಿಲ್ಲಿ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು.

ಸಾರ್ವಜನಿಕರಿಂದ ಶಾಂತ ಚಿತ್ತದಿಂದಲೇ ಅಹವಾಲುಗಳನ್ನು ಸ್ವೀಕರಿಸಿದ ಸಚಿವರು, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆ ಪರಿಹಾರಕ್ಕಾಗಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಸಾರ್ವಜನಿಕರು ಅನಾರೋಗ್ಯದ ಕಾರಣ ಶಸ್ತ್ರಚಿಕಿತ್ಸೆಗೆ ಸಹಾಯ ಕೋರಿ ಅಹವಾಲು ತೆ-ೂಡಿಕೊಂಡರು. ಇದಕ್ಕೆ ಸ್ಪಂದಿಸಿದ ಸಚಿವ ಎಚ್.ಕೆ. ಪಾಟೀಲರು ಪರಿಹಾರ ನೀಡುವ ಕುರಿತು ಭರವಸೆ ನೀಡಿದರು.

ಸಾರ್ವಜನಿಕ ಕುಂದು ಕೊರತೆಗಳ ವಿಚಾರಣೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಪ್ರಭು ಬುರಬುರೆ, ಕೃಷ್ಣಾ ಪರಾಪುರ ಮುಂತಾದವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ



ಎ.ಎ. ಕಂಬಾಳಿಮಠ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ಬಿಸಿಎಂ ಜಿಲ್ಲಾ ಅಧಿಕಾರಿ ರವಿ ಗುಂಜಿಕರ, ಡಿಎಸ್‌ಓ ಡಾ. ವೆಂಕಟೇಶ ರಾಠೋಡ, ಡಿಡಿಪಿಐ ಎಂ.ಎ. ರಡ್ಡೇರ, ಆಹಾರ ಇಲಾಖೆ ಉಪನಿರ್ದೇಶಕ ಎಂ. ಗಂಗಪ್ಪ, ಆರ್.ಟಿ.ಓ ಮಂಜುನಾಥ ಶೀರಾಳೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು, ಗಣ್ಯರು ಹಾಜರಿದ್ದರು.

ದೇವಸ್ಥಾನದ ಗೋಪುರ ನಿರ್ಮಾಣಕ್ಕೆ ಅನುದಾನ, ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮನವಿ ಸೇರಿದಂತೆ ಸಾರ್ವಜನಿಕರಿಂದ ಸಾಮೂಹಿಕ ಹಾಗೂ ವಯಕ್ತಿಕ ಅಹವಾಲುಗಳನ್ನು ಸ್ವೀಕರಿಸಿ, ತಕ್ಷಣ ಪರಿಹಾರ ಕಲ್ಪಿಸುವಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೂಚಿಸಿದರು.



**ಬಿಜೆಪಿಯಿಂದ ತುರ್ತುಪರಿಸ್ಥಿತಿಯ 'ಕರಾಳ ದಿನ' ಆಚರಣೆ**

# ಕಾಂಗ್ರೆಸ್ ದೇಶದ ಹೆಸರು ಕೆಡಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಂದಿನ ಇಂದಿರಾ ಗಾಂಧಿ ನೇತೃತ್ವದ ಕಾಂಗ್ರೆಸ್ ಸರ್ಕಾರ ಸಂವಿಧಾನದ ವಿರುದ್ಧವಾಗಿ ಏಕಪಕ್ಷೀಯ ನಿರ್ಣಯವನ್ನು ತೆಗೆದುಕೊಂಡು 21 ತಿಂಗಳವರೆಗೆ ದೇಶಕ್ಕೆ ತುರ್ತು ಪರಿಸ್ಥಿತಿಯನ್ನು ಹೇರಿ ಅದರ ವಿರುದ್ಧ ಹೋರಾಡುವವರನ್ನು ಜೈಲಿಗೆ ಕಳಿಸುವ ಹೀನ ಕೃತ್ಯ ಮಾಡಿದರು. ಅಂದಿನ ಸರ್ವಾಧಿಕಾರಿ ಪ್ರಧಾನಿಮಂತ್ರಿ ಇಂದಿರಾ ಗಾಂಧಿ ದೇಶದ ಜನರಿಗೆ ಹಾಗೂ ನಮ್ಮ ದೇಶದ ಹೆಸರನ್ನು ಕೆಡಿಸುವ ಕೆಲಸವನ್ನು ಮಾಡಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಹೇಳಿದರು.

ತುರ್ತು ಪರಿಸ್ಥಿತಿಗೆ 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ಯುವ ಮೋರ್ಚಾ ಗದಗ ನಗರ ಮಂಡಲ ವತಿಯಿಂದ ನಗರದ ಗಾಂಧಿ ಸರ್ಕಲ್‌ನಲ್ಲಿ ತುರ್ತು ಪರಿಸ್ಥಿತಿಯ ದಿನವನ್ನು ಕೈಗೆ ಕಪ್ಪು ಬಟ್ಟೆ ಧರಿಸಿ, ಗೋಡೆಗಳಿಗೆ ಭಿತ್ತಿಪತ್ರಗಳನ್ನ ಅಂಟಿಸಿ, ಜನರಿಗೆ ತಿಳಿ ಹೇಳುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆದರೆ ಅಂದು ತುರ್ತು ಪರಿಸ್ಥಿತಿಯ ವಿರುದ್ಧ ಪ್ರತಿಭಟಿಸಿರುವ ಇಂದಿನ ಮುಖ್ಯಮಂತ್ರಿ



ಸಿದ್ದಮಯ್ಯನವರು ಇಂದು ಅದೇ ಪಕ್ಷದ ಮುಖ್ಯಮಂತ್ರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸಂವಿಧಾನದ ಬಗ್ಗೆ ಮಾತನಾಡುವ ನೈತಿಕತೆ ಕಾಂಗ್ರೆಸ್ ಪಕ್ಷದ ಯಾವುದೇ ಮುಖಂಡರಿಗೆ, ಕಾರ್ಯಕರ್ತರಿಗೆ ಇಲ್ಲ. ನರೇಂದ್ರ ಮೋದಿಯವರು ಸಂವಿಧಾನವನ್ನು ಗೌರವಿಸುವುದರೊಂದಿಗೆ 3ನೇ ಬಾರಿಗೆ ಪ್ರಧಾನಮಂತ್ರಿಯಾಗಿ ದೇಶ ಸೇವೆಯನ್ನು ಮಾಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ನಗರ ಅಧ್ಯಕ್ಷ ವೆಂಕಟೇಶ ಹಬೀಬ, ನವೀನ ಕೊಟೆಕಲ್, ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ಪ್ರಮುಖರಾದ ಶ್ರೀಪತಿ ಉಡುಪಿ, ರಾಜ್ಯ ಒಬಿಸಿ ಮೋರ್ಚಾ ಕಾರ್ಯದರ್ಶಿಗಳಾದ ಸುಧೀರ ಕಾಟಿಗರ, ಗಂಗಾಧರ ಹಬೀಬ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಇರ್ಷಾದ ಮಾನ್ವಿ, ಅಶೋಕ ಸಂಕಣ್ಣವರ, ಸುರೇಶ ಚಿತ್ತರಗಿ, ಅಶೋಕ ಕುಡತಿನಿ, ಲಕ್ಷ್ಮೀ ಶಂಕರ ಕಾಕಿ, ವಸಂತ ಹಬೀಬ, ಕೇಶವ ಕೊಟ್ನಿಕಲ್, ಕಾರ್ತಿಕ್ ಶಿಗ್ಲಿಮಠ, ಜಯಶ್ರೀ ಅಣ್ಣಿಗೇರಿ, ಅವಿನಾಶ ಹೊನಗುಡಿ, ಗಣೇಶ ಪರಾಪೂರ, ಪದ್ಮಾ ಮುತ್ತಲದಿನ್ನಿ, ಚಂದ್ರು ತಡಸದ, ಮಂಜು ಬಾಗೂರ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಭಾರತದ ರಾಜಕೀಯ ಇತಿಹಾಸದಲ್ಲಿ ತಾವು ಗೆದ್ದ ಸಂದರ್ಭದಲ್ಲಿ ಕನಿಷ್ಠ 100-120 ಬಾರಿ ಸಂವಿಧಾನವನ್ನು ತಿದ್ದುಪಡಿ ಮಾಡಿರುವ ಕೀರ್ತಿ ಕಾಂಗ್ರೆಸ್ ಪಕ್ಷಕ್ಕೆ ಸಲ್ಲುತ್ತದೆ. ಈಗ ಕಾಂಗ್ರೆಸ್‌ನವರು ಸಂವಿಧಾನದ ಮೇಲೆ ಎಂದೂ ಇಲ್ಲದ ಪ್ರೇಮವನ್ನು ತೋರುತ್ತಿದ್ದಾರೆ. 60 ವರ್ಷ ಆಳಿದ ಕಾಂಗ್ರೆಸ್ ಸರ್ಕಾರ ಯಾವೊಂದು ಅಭಿವೃದ್ಧಿ ಕಾರ್ಯಕ್ಕಾಗಲಿ, ಬಡಜನರ ಹಿತ ಕಾಯುವುದಾಗಲಿ ಮಾಡದೆ, ಅಧಿಕಾರ ದಾಹಕ್ಕಾಗಿ ವಿನಾಕಾರಣ ಆಡಳಿತ ಪಕ್ಷದ ಮೇಲೆ ದೂಷಿಸುತ್ತ ಆರೋಪವನ್ನು ಮಾಡುತ್ತಿದೆ ಎಂದರು.

# ಸಫಾಯಿ ಕರ್ಮಚಾರಿಗಳಿಗೆ ಸೌಲಭ್ಯಗಳ ಅರಿವು ಮೂಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದಿಂದ ಸಫಾಯಿ ಕರ್ಮಚಾರಿಗಳಿಗೆ ಸಿಗುವ ವಿವಿಧ ಸೌಲಭ್ಯಗಳನ್ನು ಒದಗಿಸಬೇಕು. ಅವರಿಗೆ ಒದಗಿಸುವ ಪರಿಕರಗಳನ್ನು ಸಮರ್ಪಕವಾಗಿ ಬಳಸುವ ಕುರಿತು ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಲಾಗಿದ್ದ ಸಫಾಯಿ ಕರ್ಮಚಾರಿಗಳ ಸೌಲಭ್ಯದ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ವರ್ಷದಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಕೈಗೊಳ್ಳಲು ಕ್ರಮ ವಹಿಸಬೇಕು. ಸಫಾಯಿ ಕರ್ಮಚಾರಿಗಳ ಸುರಕ್ಷಿತ ಪರಿಕರ ವಿತರಣೆಯ ನಂತರ ಅವುಗಳನ್ನು ಬಳಸುವ ಕುರಿತು ನಿಯಮಿತವಾಗಿ ಅರಿವು ಮೂಡಿಸಬೇಕು ಹಾಗೂ ಸರ್ಕಾರದ ಸೌಲಭ್ಯಗಳ ಕುರಿತು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಫಾಯಿ ಕರ್ಮಚಾರಿಗಳಿಗಾಗಿ ಕಾರ್ಯಾಗಾರಗಳನ್ನು ಏರ್ಪಡಿಸಬೇಕು ಎಂದು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಮಾತನಾಡಿ, ಜಿಲ್ಲೆಯಲ್ಲಿ ಮ್ಯಾನ್ಯುವಲ್ ಸ್ಕ್ಯಾವೆಂಜರ್ ಆ್ಯಕ್ಟ್ ಉಲ್ಲಂಘನೆಯಾದ ಪ್ರಕರಣಗಳು ಕಂಡು ಬಂದಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮ ಪಂಚಾಯತಿಗಳ ಪಿಡಿಓಗಳಿಗೆ ತಮ್ಮ ವ್ಯಾಪ್ತಿಯ ಗ್ರಾಮಸಭೆಗಳಲ್ಲಿ ಪೌರಕಾರ್ಮಿಕರಿಗೆ ಸೌಲಭ್ಯ ಗಳ ಕುರಿತು ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ಸಫಾಯಿ ಕರ್ಮಚಾರಿಗಳಿಗೆ ಮನೆ ನಿರ್ಮಾಣ, ಪೌರಕಾರ್ಮಿಕರ ಮಹಿಳೆಯರ ಸಮಿತಿ ರಚನೆ, ಪೌರಕಾರ್ಮಿಕರ ಮಕ್ಕಳಿಗೆ ಶಿಕ್ಷಣ ಸೌಲಭ್ಯದ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ವಿವಿಧ ತಾಲೂಕುಗಳ ಸಮಾಜ ಕಲ್ಯಾಣಾಧಿಕಾರಿಗಳು, ಸಮಿತಿಯ ನಾಮನಿರ್ದೇಶಿತ ಸದಸ್ಯರು ಹಾಜರಿದ್ದರು.

## ಪೈಗಂಬರ್‌ವಾಸಿ



**ಶ್ರೀ ರಾಜೇಸಾಬ ಡಂಬೇದ**

ನಗರದ ತಾಜನಗರದ ತಾಜ್ ಮಸ್ಜಿದ್ ಹತ್ತಿರದ ನಿವಾಸಿ ರಾಜೇಸಾಬ ಹುಸೇನಸಾಬ ಡಂಬೆದ (86) ಮಂಗಳವಾರ ಸಂಜೆ ನಿಧನರಾದರು.

ಮೃತರು ಪತ್ನಿ, ನಾಲ್ವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಬುಧವಾರ ದಿ.26 ರಂದು ಮಧ್ಯಾಹ್ನ (ಜೋಹರ್ ನಮಾಜ್) ನಂತರ ಡಂಬಳನಾಕಾದ ಬಳಿ ಇರುವ ಫಿರ್ದೋಸ್ ಮಸ್ಜಿದ್ ಬಳಿ ಜರುಗುವುದು ಎಂದು ಮೃತರ ಪುತ್ರ ರಜಾಕ್ ಡಂಬೇದ ತಿಳಿಸಿದ್ದಾರೆ.

ದುಃಖತಪ್ತರು
ರಜಾಕ್ ಡಂಬೇದ ಹಾಗೂ ಸಹೋದರರು

## ಸಂಪಾದಕೀಯ

# ಹೈನುಗಾರರಿಗೆ ಏನು ಲಾಭ?

ರಾಜ್ಯ ಸರಕಾರ ಪೆಟ್ರೋಲ್ ಮತ್ತು ಡಿಸೇಲ್ ಬೆಲೆ ಏರಿಕೆ ಬೆನ್ನಲ್ಲೆ ಹಾಲಿನ ದರವನ್ನು ಹೆಚ್ಚಳ ಮಾಡಿದೆ. ತೈಲ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡ ರೀತಿಯಲ್ಲಿಯೇ ಹಾಲಿನ ದರ ಏರಿಕೆಯನ್ನೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. 50 ಎಂಎಲ್ ಹಾಲು ಹೆಚ್ಚಳ ಮಾಡಿ ಅದಕ್ಕೆ 2 ರೂ. ಹೆಚ್ಚುವರಿ ದರ ನಿರ್ಧರಿಸಲಾಗಿದೆ ಎಂದಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರು ಹಾಲಿನ ದರ ಏರಿಕೆ ಮಾಡಿರುವುದರ ಬಗ್ಗೆ ಆಕ್ಷೇಪಣೆ ಇಲ್ಲ. ಹಾಲಿನ ದರ ಪೆಟ್ರೋಲ್, ಡಿಸೇಲ್ ರೀತಿ ಪ್ರತಿನಿತ್ಯ ಏರಿಳಿತ ಕಾಣುವುದಿಲ್ಲ. ಆದರೆ ಹಾಲಿನ ದರ ಏರಿಕೆ ನಂತರ ಹೈನು ಉತ್ಪಾದಕರಿಗೆ ಏನು ಲಾಭ ಆಗಿದೆ ಎಂದು ನೋಡಿದರೆ, ನಯಾ ಪೈಸೆ ಹೈನು ಉತ್ಪಾದಕರಿಗೆ ದೊರೆಯದಿರುವುದು ಹಾಲು ಉತ್ಪಾದಕರ ಆಕ್ರೋಶಕ್ಕೆ ಕಾರಣವಾಗಿದೆ.

ಸರಕಾರ ಹೈನೋದ್ಯಮವನ್ನು ಬೆಳೆಸುವ ಸದುದ್ದೇಶ ಹೊಂದಿದ್ದರೆ ಹಾಲಿನ ಬೆಲೆ ಏರಿಕೆ ಮಾಡಿ, ಅದರ ಅರ್ಧ ಭಾಗವನ್ನು ಹಾಲು ಉತ್ಪಾದಕರಿಗೆ ನೀಡುವ ನಿರ್ಧಾರ ಮಾಡಿದ್ದರೆ ಎಲ್ಲರೂ ಒಪ್ಪುತ್ತಿದ್ದರು. ದರ ಏರಿಕೆಯಿಂದ ಕನಿಷ್ಠ ಹಾಲು ಉತ್ಪಾದಕರಿಗಾದರೂ ಒಂದಷ್ಟು ಹೆಚ್ಚು ಆದಾಯ ದೊರೆಯುತ್ತದೆ ಎಂದು ಭಾವಿಸಲು ಅವಕಾಶವಿತ್ತು. ಮತ್ತು ಹಾಲು ಉತ್ಪಾದಕರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದಲೇ ಬೆಲೆ ಏರಿಕೆ ಮಾಡಲಾಗಿದೆ ಎಂದು ಹಾಲಿನ ದರ ಏರಿಕೆಯನ್ನು ಸಮರ್ಥನೆ ಮಾಡಿಕೊಂಡಿದ್ದರೆ ಇವತ್ತು ದರ ಏರಿಕೆ ಬಗ್ಗೆ ವ್ಯಾಪಕ ಟೀಕೆ ವ್ಯಕ್ತವಾಗುತ್ತಿರಲಿಲ್ಲ.

ಆದರೆ ರಾಜ್ಯ ಸರಕಾರ ರೈತರ ಅಥವಾ ಹಾಲು ಉತ್ಪಾದಕರ ಆದಾಯ ಹೆಚ್ಚಳಕ್ಕಿಂತ ಸರಕಾರದ ಆದಾಯ ಹೆಚ್ಚಳದ ಬಗ್ಗೆಯೇ ಹೆಚ್ಚು ಗಮನ ಕೇಂದ್ರೀಕರಿಸಿದೆ. ಈ ಹಿಂದೆ ಹಾಲಿನ ಪ್ರೋತ್ಸಾಹ ಧನವನ್ನು 3 ರೂ. ಹೆಚ್ಚಿಸಲಾಗಿದೆ ಎಂದು ಸಿದ್ದರಾಮಯ್ಯ ಹೇಳುತ್ತಾರೆ. ಆದರೆ ಆ ಬೇಡಿಕೆ ಬಹು ವರ್ಷಗಳಿಂದ ಇತ್ತು. ಸದ್ಯ ಹಾಲಿನ ದರ ಏರಿಕೆ ಮಾಡಲಾಗಿದೆ. ಹಾಲು ಉತ್ಪಾದಕರು ಸಹ ಸಹಜವಾಗಿ ಪ್ರೋತ್ಸಾಹಧನ ಹೆಚ್ಚಳ ಮಾಡುವಂತೆ ಕೋರುತ್ತಾರೆ. ಅನೇಕ ವರ್ಷಗಳ ನಂತರ ಹಾಲಿನ ಪ್ರೋತ್ಸಾಹ ಧನ ಹೆಚ್ಚಳ ಮಾಡಲಾಗುತ್ತದೆ. ಆದರೆ ಆ ವೇಳೆಗಾಗಲೇ ಹಾಲಿನ ದರ ಮತ್ತಷ್ಟು ಏರಿಕೆಯಾಗಿರುತ್ತದೆ.

ಸರಕಾರ ಬೆಲೆ ಏರಿಕೆ ವಿಷಯದಲ್ಲಿ ತಪ್ಪು ನಿರ್ಧಾರ ಕೈಗೊಂಡಿದೆ. ಪೆಟ್ರೋಲ್ ಮತ್ತು ಡಿಸೇಲ್ ಬೆಲೆ ಏರಿಕೆಯಿಂದ ರಾಜ್ಯ ಸರಕಾರದ ವಿರುದ್ಧ ಅಸಮಾಧಾನಗೊಂಡಿದ್ದ ಜನಸಾಮಾನ್ಯರು, ಮಧ್ಯಮ ವರ್ಗದ ಜನ, ಈಗ ಹಾಲಿಗೂ ಹೆಚ್ಚಿನ ಬೆಲೆ ಕೊಡಬೇಕಾದ ಅನಿವಾರ್ಯತೆ ಬಂದೊದಗಿದೆ.

### ವೀರೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ ಕೀರ್ತನ ಸಮ್ಮೇಳನದಲ್ಲಿ ಡಾ. ಅನ್ನದಾನೀಶ್ವರ ಶಿವಯೋಗಿಗಳು

# ಸಂಗೀತಕ್ಕೆ ಮನಸೋಲದವರು ಯಾರೂ ಇಲ್ಲ




■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಗುರು ಹಾನಗಲ್ ಕುಮಾರೇಶ್ವರ ಗುರುಗಳು ಶ್ರೀರಕ್ಷೆ ನೀಡದಿದ್ದರೆ ವೀರೇಶ್ವರ ಪುಣ್ಯಾಶ್ರಮ ನಿರ್ಮಾಣ ಆಗುತ್ತಿರಲಿಲ್ಲ ಎಂದು ಮುಂಡರಗಿ ಸಂಸ್ಥಾನ ಮಠದ ಪೂಜ್ಯಶ್ರೀ ಜ. ನಾಡೋಜ ಡಾ. ಅನ್ನದಾನೀಶ್ವರ ಶಿವಯೋಗಿಗಳು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಸೋಮವಾರ ಜರುಗಿದ ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ.ಪಂ. ಪಂಚಾಕ್ಷರ ಗವಾಯಿಗಳವರ 80ನೇ ಪುಣ್ಯಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ, ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಕೀರ್ತನ ಸಮ್ಮೇಳನ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡಿದರು.

ಮುಂಡರಗಿಯ ಶ್ರೀಮಠಕ್ಕೆ ಮತ್ತು ವೀರೇಶ್ವರ ಪುಣ್ಯಾಶ್ರಮಕ್ಕೆ ಬಹಳ ನಂಟಿದೆ. ಈ ಹಿಂದೆ ಪುಣ್ಯಾಶ್ರಮವು ಆರ್ಥಿಕ ಸಂಕಷ್ಟದಲ್ಲಿದ್ದಾಗ ಹೇಮರಡ್ಡಿ ಮಲ್ಲಮ್ಮ ನಾಟಕ ಒಂದು ವರ್ಷ ಪ್ರದರ್ಶನ ಕಂಡು ಸಂಕಷ್ಟದಿಂದ ಪಾರು ಮಾಡಿತು. ಅಲ್ಲದೆ, ಆಶ್ರಮವು ಉತ್ತರೋತ್ತರವಾಗಿ ಬೆಳೆಯಲು 1,11,111 ರೂ.ಗಳನ್ನು ನೀಡಿದ್ದೆವು. ಸಂಗೀತಕ್ಕೆ ಯಾವುದೇ ಜಾತಿ, ಧರ್ಮವಿಲ್ಲ, ಸಂಗೀತಕ್ಕೆ ಮನಸೋಲದವರು ಯಾರೂ ಇಲ್ಲ. ಇಲ್ಲಿ ಸಂಗೀತ ವಿದ್ಯೆ ಕಲಿತ ವಿದ್ಯಾರ್ಥಿಗಳು ವಿಶ್ವದಾದ್ಯಂತ ಪುಣ್ಯಾಶ್ರಮದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಹೇಳಿದರು.

ಕಪೋತಗಿರಿ ನಂದಿವೇರಿ ಸಂಸ್ಥಾನ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ, ಉಭಯ ಗುರುಗಳ ಸಂಗೀತ, ಸಾಹಿತ್ಯ ಶಿಕ್ಷಣಹಾಗೂ ಗುರು ಪರಂಪರೆಯನ್ನು ಇಂದಿನ ಗುರುಗಳಾದ ಕಲ್ಲಯ್ಯಜ್ಜನವರು ಮುಂದುರೆಸಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕನಕಗಿರಿ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದ ಪೂಜ್ಯಶ್ರೀ ಡಾ. ಚನ್ನಮಲ್ಲ ಮಹಾಸ್ವಾಮಿಗಳು, ಯಲಬುರ್ಗಾ ಮುರುಡಿ ಹಿರೇಮಠದ ಪೂಜ್ಯಶ್ರೀ ಬಸವಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಗುಳೇದಗುಡ್ಡದ ಒಪ್ಪತ್ತೇಶ್ವರ ಸಂಸ್ಥಾನಮಠದ ಪೂಜ್ಯಶ್ರೀ ಅಭಿನವ ಒಪ್ಪತ್ತೇಶ್ವರ ಮಹಾ ಸ್ವಾಮಿಗಳು, ಹೂವಿನಹಡಗಲಿ ಗವಿಸಿದ್ದೇಶ್ವರ ಶಾಖಾ ಮಠದ ಪೂಜ್ಯಶ್ರೀ ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು, ಅಣ್ಣಿಗೇರಿ ದಾಸೋಹ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು, ಅಡ್ನೂರ ದಾಸೋಹ ಶ್ರೀಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಓಂಕಾರೇಶ್ವರ ಹಿರೇಮಠದ ಪೂಜ್ಯಶ್ರೀ ಫಕೀರೇಶ್ವರ ಪಟ್ಟಾಧ್ಯಕ್ಷರು, ಅಸುಂಡಿ ಆಧ್ಯಾತ್ಮ ವಿದ್ಯಾಶ್ರಮದ ಪೂಜ್ಯಶ್ರೀ ಶಿವಶರಣೆ ಮೈತ್ರಾದೇವಿ ತಾಯಿಯವರು, ಸಂಭಾಪುರದ ಈರಮ್ಮ ತಾಯಿ ಆಶ್ರಮದ ಪೂಜ್ಯಶ್ರೀ ಅಭಿನವ ರುದ್ರಮ್ಮ ತಾಯಿಯವರು ಸಮ್ಮುಖ ವಹಿಸಿದ್ದರು.

ವೇದಿಕೆಯ ಮೇಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಸಿದ್ದನಗೌಡ ಪಾಟೀಲ, ಶೇಖಣ್ಣ ಗದ್ದಿಕೇರಿ, ಶಶಿಧರ ಬಿದನೂರ, ವೀರಣ್ಣ ಕಾಡಪ್ಪನವರ, ರಾಜು ಬೂದನೂರ, ನಿರಂಜನ ಬುಳ್ಳ, ಚನ್ನಬಸಯ್ಯ ಬಂಕಾಪೂರಮಠ, ಮಂಜುನಾಥ ಹುಚ್ಚಣ್ಣವರ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪಂ.ಪುಟ್ಟರಾಜ ಕವಿಗವಾಯಿಗಳು ರಚಿಸಿದ ಗಾನಸುಧಾ ಭಾಗ–1 ಗ್ರಂಥ ಹಾಗೂ 'ಆರೋಡ ಸಿರಿ' ಧ್ವನಿ ಸುರುಳಿ ಬಿಡುಗಡೆಯಾದವು. ಪಂ.ಶಿವಾನಂದೀಶ್ವರ ಶಾಸ್ತ್ರಿಗಳು ಹಾಗೂ ತಾವರಗೆರೆಯ ಪಂ. ಶಿವರಾಜಶಾಸ್ತ್ರಿಗಳು ಪಂ. ಪುಟ್ಟರಾಜ ಗವಾಯಿಗಳವರ ಕೀರ್ತನ ಮಾಡಿದರು. ರಾತ್ರಿ ಸ್ವರ ಸಮಾರಾಧನಾ ಸಂಗೀತ ಕಾರ್ಯಕ್ರಮ ಜರುಗಿತು.

ಹೊಸಳ್ಳಿಯ ಬೂದೀಶ್ವರ ಸಂಸ್ಥಾನಮಠದ ಪೂಜ್ಯಶ್ರೀ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿವಯೋಗ ಮಂದಿರ ಮಠಾದೀಶರನ್ನು ನಿರ್ಮಾಣ ಮಾಡಿದರೆ ಉಭಯ ಶ್ರೀಗಳು ಅಂಧ–ಅನಾಥ ಬದುಕನ್ನು ಬೆಳಗಿದ್ದಾರೆ. ದೇವರನ್ನು ಹುಡುಕಿಕೊಂಡು ಹೋಗುವದರಿಂದ ದೇವರು ಸಿಗುವದಿಲ್ಲ, ಕಣ್ಣಿಗೆ ಕಾಣುವ ಗುರುವಿನ ಪಾದವನ್ನು ಗಟ್ಟಿಯಾಗಿ ಹಿಡಿದರೆ ಕಾಣದ ದೇವರು ಕೈ ಹಿಡಿಯುತ್ತಾನೆ. ಕಲ್ಲಯ್ಯಜ್ಜನವರು ಎಲ್ಲ ಗುರು ಬಂಧುಗಳನ್ನು ಕಟ್ಟಿಕೊಂಡು ಉಭಯ ಗುರುಗಳ ಮಾರ್ಗದರ್ಶನದಂತೆ ಪುಣ್ಯಾಶ್ರಮವನ್ನು ಉತ್ತರೋತ್ತರವಾಗಿ ಬೆಳೆಸುತ್ತಿದ್ದಾರೆ. ಪುಣ್ಯಾಶ್ರಮವು ಮುಗಿಲೆತ್ತರಕ್ಕೆ ಬೆಳೆಯಬೇಕು. ಅದು ಬೆಳೆದರೆ ಸಾವಿರಾರು ಅಂಧ–ಅನಾಥರಿಗೆ ಆಶ್ರಯ ಸಿಗುತ್ತದೆ ಎಂದು ಹೇಳಿದರು.

### ಕುಂದಗೋಳದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ

# ಸಮಸ್ಯೆ ಇತ್ಯರ್ಥಕ್ಕೆ ತಕ್ಷಣವೇ ಸ್ಪಂದಿಸಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಜನರು ಸಮಸ್ಯೆಗಳ ಬಗ್ಗೆ ಸರ್ಕಾರಿ ಕಚೇರಿಗಳಿಗೆ ಅರ್ಜಿ ಸಲ್ಲಿಸಿದರೆ, ಅಧಿಕಾರಿಗಳು ಸಕಾರಾತ್ಮಕವಾಗಿ ತಕ್ಷಣವೇ ಸ್ಪಂದನೆ ನೀಡಬೇಕು. ಜನರ ಸಮಸ್ಯೆಗಳ ಇತ್ಯರ್ಥಕ್ಕೆ ವಿಳಂಬ ಮಾಡದೇ ತಕ್ಷಣವೇ ಸಮಸ್ಯೆಯನ್ನು ಬಗೆಹರಿಸಲು ಅಧಿಕಾರಿಗಳು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದರು.

ಸೋಮವಾರ ಕುಂದಗೋಳದ ಸವಾಯಿ ಗಂಧರ್ವ ಸ್ಮಾರಕ ಭವನದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಜನಸ್ಪಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.


2023ರಲ್ಲಿ ಜನಸ್ಪಂದನಾ ಕಾರ್ಯಕ್ರಮ ಪ್ರಾರಂಭವಾಗಿದೆ. ಎಲ್ಲ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಈ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದೆ. ಪ್ರತಿ ತಾಲೂಕಿನಲ್ಲಿ ಜನಸ್ಪಂದನಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರ ಸಮಸ್ಯೆಗಳನ್ನು ಶೀಘ್ರಗತಿಯಲ್ಲಿ ಇತ್ಯರ್ಥಪಡಿಸುವುದು ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ. ಯಾವುದೇ ಅರ್ಜಿಗೆ ನಿಗದಿತ ಕಾಲಮಿತಿ ಇರುವುದಿಲ್ಲ. ಹೀಗಾಗಿ ಅಧಿಕಾರಿಗಳು ಜನರು ಸಲ್ಲಿಸಿದ ಅರ್ಜಿಗಳಿಗೆ ಅಲ್ಪ ಕಾಲದಲ್ಲೇ ಪರಿಹಾರ ಒದಗಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ.ಟಿ.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಉಪವಿಭಾಧಿಕಾರಿಗಳಾದ ಶಾಲಂ ಹುಸೇನ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಸರ್ಕಾರಿ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಕುಂದಗೋಳ ತಹಸೀಲ್ದಾರ ಅಶೋಕ ಶಿಗ್ಗಾಂವಿ ಸ್ವಾಗತಿಸಿದರು.

ಜುಲೈ 15ರೊಳಗೆ ಜನರ ಸಮಸ್ಯೆಗಳನ್ನು ಅಧಿಕಾರಿಗಳು ಇತ್ಯರ್ಥಪಡಿಸಬೇಕು. ಅರ್ಜಿಗಳನ್ನು ಗಣಕೀಕರಣ ಮಾಡಿಕೊಂಡು ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ತಪ್ಪದೇ ಅರ್ಜಿಗಳಿಗೆ ಸ್ವೀಕೃತಿಯನ್ನು ಪಡೆದುಕೊಳ್ಳಬೇಕು. ಜನರ ಸಮಸ್ಯೆಗಳನ್ನು ಯಾವುದೇ ಅಡೆತಡೆ ಇಲ್ಲದೆ ಇತ್ಯರ್ಥ ಪಡಿಸಬೇಕು. ಗ್ರಾಮ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

# ಬಿಜೆಪಿ ಕಾರ್ಯಕರ್ತರ ಅವಾಚ್ಯ ಶಬ್ದ ಪ್ರಯೋಗ ಖಂಡನೀಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಇತ್ತೀಚೆಗೆ ಪಟ್ಟಣದಲ್ಲಿ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನಾ ಸಭೆಯಲ್ಲಿ ಬಿಜೆಪಿ ಕಾರ್ಯಕರ್ತರೊಬ್ಬರು ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳಿಗೆ ವೈಯಕ್ತಿಕವಾಗಿ ಅವಾಚ್ಯ ಶಬ್ದಗಳನ್ನು ಪ್ರಯೋಗ ಮಾಡಿದ್ದು ಖಂಡನೀಯ ಎಂದು ಕಾಂಗ್ರೆಸ್‌ನ ನರೇಗಲ್ಲ ಶಹರ ಘಟಕದ ಅಧ್ಯಕ್ಷ ಶಿವನಗೌಡ ಪಾಟೀಲ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೋರಾಟ ಮಾಡಲು, ಪ್ರತಿಭಟನೆ ಮಾಡಲು ಎಲ್ಲರಿಗೂ ಹಕ್ಕಿದೆ. ಹಾಗೆಂದು ಯಾವ ಕಾರಣಕ್ಕೂ ಬಾಯಿ ಸಡಿಲು ಬಿಡಬಾರದು. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಳವನ್ನು ವಿರೋಧಿಸಿ ಬಿಜೆಪಿ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿತು. ಆದರೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರನ್ನು ಏಕ ವಚನದಲ್ಲಿ ಸಂಬೋಧಿಸಿದ್ದಲ್ಲದೆ ಅವಾಚ್ಯ ಶಬ್ದಗಳ ಪ್ರಯೋಗ ಮಾಡಿದ್ದಾರೆ. ಇದನ್ನು ಕಾಂಗ್ರೆಸ್ ಘಟಕವು ತೀವ್ರವಾಗಿ ಖಂಡಿಸುತ್ತದೆ.

ಆ ಕಾರ್ಯಕರ್ತ ಬಹಿರಂಗ ಕ್ಷಮೆ ಕೇಳುವಂತೆ ಮಾಡಬೇಕು. ಆತನ ಮೇಲೆ ಸೂಕ್ತ ಕ್ರಮವನ್ನು ಜರುಗಿಸಿ, ತೆಗೆದುಕೊಂಡ ಕ್ರಮದ ಬಗ್ಗೆ ಸಾರ್ವಜನಿಕವಾಗಿ ವಿವರಗಳನ್ನು ತಿಳಿಸಬೇಕು. ಇಲ್ಲವಾದರೆ ಕಾಂಗ್ರೆಸ್ ಪಕ್ಷ ತೀವ್ರವಾದ ಪ್ರತಿಭಟನೆಯನ್ನು ಕೈಗೊಳ್ಳುಗುತ್ತದೆ ಎಂದು ಎಚ್ಚರಿಸಿದರು.

ಮುಖಂಡ ಮೈಲಾರಪ್ಪ ಚಳ್ಳಮರದ ಮಾತನಾಡಿ, ಕಳೆದ ಒಂದು ವರ್ಷದ ಹಿಂದೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ ಬಡವರ ಮತ್ತು ಹಿಂದುಳಿದವರ ಏಳಿಗೆಗಾಗಿ ಅನೇಕ ಸೌಲಭ್ಯಗಳನ್ನು ನೀಡಿದೆ. ರಾಜ್ಯವು ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಬಿಜೆಪಿ ಅಭಿವೃದ್ಧಿಯ ಕಡೆಗೆ ಗಮನ ನೀಡದೆ ಇಂತಹ ಬಾಯಿ ಚಪಲದ ಮಾತುಗಳ ಮೂಲಕ ಅಧಿಕಾರದ ಗದ್ದುಗೆ ಹಿಡಿಯುವ ಕನಸನ್ನು ಕಂಡರೆ ಅದು ತಿರುಕನ ಕನಸಾಗುತ್ತದೆ. ಈ ರೀತಿಯ ಕೀಳುಮಟ್ಟದ ಮಾನಸಿಕತೆಯನ್ನು ತೋರಿಸಬಾರದು ಎಂದರು.

ಸುದ್ದಿಗೋಷ್ಠಿಯಲ್ಲಿ ರಾಚಯ್ಯ ಮಾಲಗಿತ್ತಿಮಠ, ಶೇಖರಗೌಡ ಪೊಲೀಸ್ ಪಾಟೀಲ, ಅಲ್ಲಾಭಕ್ಷಿ ನದಾಫ್, ಶೇಕಪ್ಪ ಕೆಂಗಾರ, ಕೃಷ್ಣಪ್ಪ ಜುಟ್ಲ, ಶೇಕಪ್ಪ ಜುಟ್ಲ ಮುಂತಾದವರು ಪಾಲ್ಗೊಂಡಿದ್ದರು.

# ಭಕ್ತಿ ದೃಢವಾಗಿರಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಭಕ್ತಿ ಎಂದರೆ ಗುರುದೇವತೆಯೊಳ್ ಅನುರಾಗದಿಂದಹುದೇ ಭಕ್ತಿ, ರಾಗವೆಂದರೆ ಪ್ರೀತಿ. ಈ ಪ್ರೀತಿ ಸ್ತ್ರೀಯಲ್ಲಿ ಇದ್ದರೆ ಕಾಮವೆನಿಸುವುದು, ಪುತ್ರಾದಿಗಳಲ್ಲಿದ್ದರೆ ಮೋಹವೆನಿಸುವುದು, ಧನಕನಕಾದಿಗಳಲ್ಲಿ ಇದ್ದರೆ ಲೋಭವಿಸುವುದು. ಇದೇ ಪ್ರೀತಿ ಗುರು, ದೇವತೆಗಳಲ್ಲಿ ಇರುವುದರಿಂದ ಭಕ್ತಿ ಎನಿಸುತ್ತದೆ. ಅಂತೆಯೇ ತುಳಸಿದಾಸರು ಭಕ್ತರು ಎನಿಸಿಕೊಂಡರು ಎಂದು ರನ್ನಬೆಳಗಲಿಯ ಸಿದ್ದಾರೂಢ ಮಠ ಶಂಭುಲಿಂಗಾಶ್ರಮದ ಪೂಜ್ಯಶ್ರೀ ಕೃಷ್ಣೇಗೌಡ್ರ ಕೋಲೂರ ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂಚಾಕ್ಷರಿ ಗವಾಯಿಗಳವರ 80ನೇ ಹಾಗೂ ಪಂ.ಪುಟ್ಟರಾಜ ಕವಿ ಗವಾಯಿಗಳವರ 14ನೇ ಸ್ಮರಣೋತ್ಸವದ ಅಂಗವಾಗಿ ಜೂನ್ 22ರಿಂದ 26ರವರೆಗೆ ನಡೆಯುವ ಕೈವಲ್ಯ ಪದ್ಧತಿ ಶಿವಯೋಗ ಕುರಿತು ಶಿವಾನುಭವದಲ್ಲಿ ಅವರು ಮಾತನಾಡಿ, ಭಕ್ತಿ ದೃಢವಾಗಿರಬೇಕು. ದೃಢವಿಲ್ಲದ ಭಕ್ತಿ ಆಡಡೆದ ಕುಂಭದಲ್ಲಿ ಸುಜಲ ತುಂಬಿದಂತೆ ಎಂದು ವಚನಕಾರರು ಹೇಳಿದ್ದಾರೆ. ನಿಜಗುಣರು ಅನುಪಮಾಚಲ ಭಕ್ತಿ ಭಾವಾನುಕೂಲವೇ ಶಂಭುಲಿಂಗವೆಂದು ಹೇಳಿರುವದುಂಟು ಎಂದು ತಿಳಿಸಿದರು.

ಕರಿಕಟ್ಟಿಯ ಕುಮಾರಶಾಸ್ತ್ರಿಗಳು ಹಿರೇಮಠ ಮಾತನಾಡಿ, ದೇವತೆಗಳ ಮೇಲೆ ದೃಢವಾದ ಪ್ರೀತಿ ವ್ಯಕ್ತ ಮಾಡುವ ರೀತಿಗಳಿಗೆ ನವವಿಧ ಭಕ್ತಿ ಎಂದು ಕರೆಯುತ್ತಾರೆ. ಅವುಗಳಲ್ಲಿ ಶ್ರವಣಂ–ಪರೀಕ್ಷಿತ ಕೀರ್ತನಂ–ನಾರದ, ಸ್ಮರಣಂ–ಪ್ರಹ್ಲಾದ, ಪಾದಸೇವನಂ–ಲಕ್ಷ್ಮಿ, ಅರ್ಚನಂ– ಚೋಳರಾಜ, ವಂದನಂ–ಅಕ್ರೋಶ, ದಾಸ್ಯಂ–ಹನುಮಂತ, ಸಖ್ಯ–ಅರ್ಜುನ, ಆತ್ಮ ನಿವೇದನಂ–ಬಲಿಚಕ್ರವರ್ತಿ ಭಕ್ತಿಯ ವಿಧಗಳಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಡ್ನೂರ ದಾಸೋಹ ಶ್ರೀಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಾನಿಧ್ಯ ವಹಿಸಿದ್ದರು.

# ಸಂಸ್ಕೃತಿಯ ಉಳಿವು ಹಬ್ಬಗಳ ಆಚರಣೆಯಲ್ಲಿದೆ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಶ್ರಮದ ಬದುಕು ಶ್ರೇಯಸ್ಸಿಗೆ ಮೂಲ. ನೊಂದು ಬೆಂದು ಬಸವಳಿದ ಜೀವನಕ್ಕೆ ಉಲ್ಲಾಸ ಉತ್ಸಾಹ ತುಂಬುವ ಶಕ್ತಿ ಹಬ್ಬಗಳಿಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಸೋಮೇಶ್ವರ ನಗರದ ಶ್ರೀ ಬೈರವೇಶ್ವರ ದೇವಸ್ಥಾನದ ಆವರಣದಲ್ಲಿ ಜರುಗಿದ 'ಸುಗ್ಗಿ ಹಬ್ಬ' ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಲೆನಾಡಿನ ಪ್ರಾಂತಗಳಲ್ಲಿ ಹಬ್ಬಗಳ ಆಚರಣೆ ವೈಶಿಷ್ಟ್ಯಪೂರ್ಣವಾಗಿರುತ್ತವೆ. ವರ್ಷವಿಡೀ ದುಡಿದು ಬಳಲಿ ಬಂದ ಜನತೆಗೆ ಹೊಸ ಹುಮ್ಮಸ್ಸು ಹಬ್ಬಗಳ ಆಚರಣೆಯಿಂದ ದೊರಕುತ್ತದೆ. ಪ್ರತಿಯೊಂದು ಹಬ್ಬದ ಆಚರಣೆಗೆ ಒಂದಿಲ್ಲ ಒಂದು ಮಹತ್ವ ಇರುವುದನ್ನು ಕಾಣುತ್ತೇವೆ. ಸಂಸ್ಕೃತಿಯ ಉಳಿವು ಹಬ್ಬಗಳ ಆಚರಣೆಯಲ್ಲಿದ್ದು, ಜೀವನದ ಉತ್ಕರ್ಷತೆಗೆ ಕಾರಣವಾಗುತ್ತವೆ. ಸಾಮರಸ್ಯ, ಸದ್ಭಾವನೆಗೆ ಹಬ್ಬಗಳ ಆಚರಣೆ ಇನ್ನಷ್ಟು ಬಲ ತಂದು ಕೊಡುತ್ತದೆ. ಮನುಷ್ಯ ಕುಡಿತ, ಜೂಜು, ಗುಟಕಾ, ಸರಾಯಿ ಇವುಗಳಿಂದ ಮುಕ್ತವಾಗಿ ಧರ್ಮ ಮಾರ್ಗದಲ್ಲಿ ಬಾಳಿದರೆ ಯಶಸ್ಸು ನಿಶ್ಚಿತವೆಂದರು.

ಬಾಲಚಂದ್ರಗೌಡರು, ಶ್ರೀಮತಿ ಹೇಮಲತಾ ಪ್ರಭಾಕರ, ಮಹೇಶ ಆಚಾರಿ, ಪತ್ರಕರ್ತ ಯಜ್ಞಪುರುಷ ಭಟ್ ಸಮಯೋಚಿತವಾಗಿ ಮಾತನಾಡಿದರು. ಗ್ರಾ.ಪಂ ಮಾಜಿ ಅಧ್ಯಕ್ಷ ಎಂ.ಎಸ್. ಅರುಣೇಶ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎಸ್. ಜಯಪ್ರಕಾಶ, ಪ್ರಭಾಕರ ಗುತ್ತಿಗೆದಾರ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಗದಿಗೆಯ್ಯ ಹಿರೇಮಠರಿಂದ ವೇದಘೋಷ ಮತ್ತು ಪ್ರಾರ್ಥನೆ ಜರುಗಿತು. ಗ್ರಾ.ಪಂ ಸದಸ್ಯ ಜಗದೀಶ್ಚಂದ್ರ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಜನಜಾಗೃತಿಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಪಾದಯಾತ್ರೆ ಮಾಡಿ ಬೈರವೇಶ್ವರ ಸ್ವಾಮಿಗೆ ಪುಷ್ಪಾರ್ಚನೆ ಸಲ್ಲಿಸಿದರು.



ರೋಣ ತಾಲೂಕಿನ ಹೊಸಳ್ಳಿ ಗ್ರಾ.ಪಂ ಅಧ್ಯಕ್ಷರಾಗಿ ಬಸಪ್ಪ ಮಾರನಬಸರಿ, ಉಪಾಧ್ಯಕ್ಷರಾಗಿ ರೇಖಾ ಮಾದರ ಅವಿರೋಧವಾಗಿ ಆಯ್ಕೆಯಾಗಿದ್ದು, ನೂತನ ಅಧ್ಯಕ್ಷ–ಉಪಾಧ್ಯಕ್ಷರಿಗೆ ಪುರಸಭೆಯ ಉಪಾಧ್ಯಕ್ಷ ಸಂಗನಗೌಡ ಪಾಟೀಲ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಗ್ರಾ.ಪಂ ಸದಸ್ಯರು ಅಭಿನಂದನೆಯನ್ನು ಸಲ್ಲಿಸಿದರು.

### ತೋಂಟದಾರ್ಯ ಮಠದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

# ಯೋಗ ಪೂರ್ವಜರ ಉತ್ಕೃಷ್ಟ ಕೊಡುಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸೃಷ್ಟಿಯಲ್ಲಿರುವ ಸಕಲ ಜೀವರಾಶಿಗಳ ಒಳಿತನ್ನು ಭಗವಂತ ಬಯಸಿದರೆ ಮಾನವ ಒಂದು ಹೆಜ್ಜೆ ಮುಂದೆ ಬಂದು ಮೋಕ್ಷ, ಮುಕ್ತಿ, ಸುಖ, ಸಂತೋಷಗಳ ಆಶೆಯಿಂದ ಏನೆಲ್ಲವನ್ನು ಸೃಷ್ಟಿಸಿಕೊಂಡಿದ್ದಾನೆ. ಈ ನಿಟ್ಟಿನಲ್ಲಿ ನಮ್ಮ ಪೂರ್ವಜರು ಹಲವು ವಿಧದ ಕೊಡುಗೆಗಳನ್ನು ನೀಡಿದ್ದಾರೆ. ಅವುಗಳಲ್ಲಿ ಯೋಗವು ಉತ್ಕೃಷ್ಟ ಕೊಡುಗೆಯಾಗಿದೆ ಎಂದು ಹೈದರಾಬಾದ ಗುರು ಮಂದಿರದ ಪೂಜ್ಯಶ್ರೀ ಶಿವಹಂಸಾರೂಢ ಪ್ರಭುಸ್ವಾಮಿಗಳು ತಿಳಿಸಿದರು.

ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಲಿಂಗಾಯತ ಪ್ರಗತಿಶೀಲ ಸಂಘ ಗದಗ–ಬೆಟಗೇರಿ ವತಿಯಿಂದಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಗದಗ ಇವರ ಸಹಕಾರದೊಂದಿಗೆ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಜರುಗಿದ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಗಳ ಸಮ್ಮುಖ ವಹಿಸಿ ಶ್ರೀಗಳು ಮಾತನಾಡಿದರು.

ಪೂಜ್ಯಶ್ರೀ ಮಹಾಂತದೇವರು ಮಾತನಾಡಿ, ಯೋಗದಲ್ಲಿ ಸಾಕಷ್ಟು ಪ್ರಕಾರಗಳಿವೆ. ಅವುಗಳಲ್ಲಿ ಶಿವಯೋಗ ಶ್ರೇಷ್ಠವಾದದ್ದು. ಶಿವಯೋಗ ಸಾಧನೆಯಿಂದ ಶಿವನೊಲುಮೆ ಜೊತೆಗೆ ಬದುಕಿನಲ್ಲಿ ಶಾಂತಿ, ನೆಮ್ಮದಿ, ಸಂತೃಪ್ತಿ, ಸಮೃದ್ಧಿಗಳನ್ನು ಪಡೆಯಲು ಸಾಧ್ಯವಾಗುವದು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಡಾ. ದೀಪಾ ಮೂರಶಿಳ್ಳಿನ ಮಾತನಾಡಿ, ಮಹಿಳೆಯರು ಯೋಗ ಸಾಧನೆ ಜೊತೆಯಲ್ಲಿ ತಮ್ಮ ಅಡುಗೆ ಮನೆಯನ್ನು ಉತ್ತಮ ಆಹಾರ ತಯಾರಿಕೆಯ ಆಲಯವನ್ನಾಗಿ ಮಾಡಿಕೊಂಡರೆ ಕುಟುಂಬ ಸದಸ್ಯರೆಲ್ಲರೂ ಆರೋಗ್ಯವಂತರಾಗುವರು. ಹೀಗಾದಲ್ಲಿ ಯೋಗ ದಿನಾಚರಣೆ ಧ್ಯೇಯ ವಾಣಿ 'ಮಹಿಳೆಯರ ಸಬಲೀಕರಣಕ್ಕಾಗಿ ಯೋಗ' ಎಂಬುದು ಸಾರ್ಥಕಗೊಳ್ಳುವುದೆಂದು ಸೂಚಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿದರು. ವೇದಿಕೆಯಲ್ಲಿ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ನಿವೃತ್ತ ಇಂಜಿನಿಯರ್ ವಿ.ಎಚ್. ಪಾಟೀಲ, ಸಿದ್ಧಲಿಂಗ ನಗರದಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಹಿರಿಯ ವಿದ್ಯಾರ್ಥಿಗಳು, ತೋಂಟದಾರ್ಯ ಮಠದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರು, ಯೋಗ ಪಾಠಶಾಲೆಯ ಯೋಗ ಸಾಧಕ ವೃಂದ, ಶ್ರೀಮಠದ ಸದ್ಭಕ್ತ ವೃಂದ ಇನ್ನಿತರೆ ಯೋಗಾಸಕ್ತರು ಪಾಲ್ಗೊಂಡಿದ್ದರು.

ಸುನಂದಾ ಜ್ಯಾನೋಪಂತರ ಪ್ರಾರ್ಥಿಸಿದರು. ಡಾ. ಎಂ.ವಿ. ಐಹೊಳ್ಳಿ, ವಿ.ಎಂ. ಮುಂದಿನಮನಿ, ಯಶವಂತ ಮತ್ತೂರ, ಜಯಶ್ರೀ ಡಾವಣಗೇರಿ, ಅರುಣಾ ಇಂಗಳಳ್ಳಿ, ಅಜಿತಾ ಶಿವಪ್ರಸಾದ, ಗೌರಿ ಜಿರಂಕಳಿ ಮಾದರಿ ಯೋಗ ಪ್ರದರ್ಶನ ನೀಡಿದರು. ವಿಜಯಾ ಚನ್ನಶೆಟ್ಟಿ ಸ್ವಾಗತಿಸಿದರೆ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು.

### ವಡವಿ ಮೊರಾರ್ಜಿ ವಸತಿ ಶಾಲೆಯ ಪ್ರಾರಂಭಕ್ಕೆ ಮುಹೂರ್ತ ಯಾವಾಗ?

# 4 ವರ್ಷವಾದರೂ ಮುಗಿಯದ ಕಾಮಗಾರಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯು ವಿಧಾನಸಭಾ ಕ್ಷೇತ್ರ ಎಸ್.ಸಿ (ಮೀಸಲು) ಮತಕ್ಷೇತ್ರವಾಗಿದ್ದು, ಈ ಭಾಗದಲ್ಲಿಯ ಎಸ್.ಸಿ ಸಮುದಾಯದ ಮಕ್ಕಳಿಗೆ ವಸತಿ ಸಹಿತ ಶಿಕ್ಷಣವನ್ನು ನೀಡುವುದಕ್ಕೆ ವಡವಿ ಗ್ರಾಮಕ್ಕೆ ಮೊರಾರ್ಜಿ ವಸತಿ ಶಾಲೆಯನ್ನು ಮಂಜೂರು ಮಾಡಿ ಕಟ್ಟಡ ನಿರ್ಮಾಣಕ್ಕೂ ಸಹ ಅಸ್ತು ಎಂದಿತ್ತು. ಆದರೆ ಅಧಿಕಾರಿಗಳ ಇಚ್ಛಾಶಕ್ತಿ ಕೊರತೆಯಿಂದಲೋ ಏನೋ ನಿರ್ಮಾಣ ಕಾರ್ಯ 4 ವರ್ಷ ಗತಿಸಿದರೂ ಪೂರ್ಣಗೊಂಡಿಲ್ಲ. ಹೀಗಾಗಿ ಈ ಶಾಲೆಯ ಪ್ರಾರಂಭಕ್ಕೆ ಮುಹೂರ್ತ ಯಾವಾಗ ಎಂಬ ಪ್ರಶ್ನೆ ಈ ಭಾಗದಲ್ಲಿಯ ಜನತೆಯನ್ನು ಕಾಡುತ್ತಿದೆ.

ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ಇದರ ವತಿಯಿಂದ 2020ರ ಜುಲೈ 17ರಂದು ಅಂದಿನ ಶಾಸಕ ರಾಮಣ್ಣ ಲಮಾಣಿ ವಡವಿ ಗ್ರಾಮದ ಹೊರವಲಯದಲ್ಲಿಯ 10 ಎಕರೆ 5 ಗುಂಟೆಯ ವಿಶಾಲವಾದ ಜಮೀನಿನಲ್ಲಿ ಅಂದಾಜು 19 ಕೋಟಿ ರೂ ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣಕ್ಕೆ ಚಾಲನೆ ನೀಡಿದ್ದರು. ಇದೀಗ 21 ಕೋಟಿ ರೂ ಅಂದಾಜು ವೆಚ್ಚವಿದೆ. ಆದರೆ ಇಲ್ಲಿಯವರೆಗೂ ವಸತಿ ಶಾಲೆಯ




ನಿರ್ಮಾಣದ ಪೂರ್ಣ ಪ್ರಮಾಣದ ಕೆಲಸಗಳು ನಿಧಾನಗತಿಯಲ್ಲಿ ಸಾಗುತ್ತಿರುವುದರ ಪರಿಣಾಮ, ಪ್ರಸಕ್ತ ಶೈಕ್ಷಣಿಕ ವರ್ಷ ಪ್ರಾರಂಭವಾದರೂ ಸಹ ಮುಗಿಯದೇ ಇರುವುದಕ್ಕೆ ಈ ಭಾಗದಲ್ಲಿಯ ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಸುಸಜ್ಜಿತ ಕಟ್ಟಡ ಲಭ್ಯವಾಗದ ಕಾರಣ ಈ ಶಾಲೆಯನ್ನು ಲಕ್ಷ್ಮೇಶ್ವರಕ್ಕೆ ಸ್ಥಳಾಂತರಿಸಲಾಯಿತು. ಅಲ್ಲಿ ತಿಂಗಳಿಗೆ ಲಕ್ಷಾಂತರ ಬಾಡಿಗೆ ವ್ಯಯಿಸಿ ವಸತಿ ಶಾಲೆಯನ್ನು ನಡೆಸಲಾಗುತ್ತಿದೆ. ಸದ್ಯ ವಸತಿ ಶಾಲೆಯಲ್ಲಿ 7ನೇ ತರಗತಿಯಲ್ಲಿ–50, 8ನೇ ತರಗತಿಯಲ್ಲಿ–45, 9ನೇ ತರಗತಿಯಲ್ಲಿ–49 ಹಾಗೂ 10ನೇ ತರಗತಿಯಲ್ಲಿ 41 ವಿದ್ಯಾರ್ಥಿಗಳಿದ್ದಾರೆ. 6ನೇ ತರಗತಿಗೆ ಪ್ರವೇಶಾತಿ ಪ್ರಕ್ರಿಯೆ ನಡೆಯುತ್ತಿರುವದರಿಂದ ಈ ವರ್ಗಕ್ಕೂ ಸಹ 40 ವಿದ್ಯಾರ್ಥಿಗಳು ಬರುವವರಿದ್ದು, ಒಟ್ಟೂ ಸುಮಾರು 240 ವಿದ್ಯಾರ್ಥಿಗಳು ಬಾಡಿಗೆ ಕಟ್ಟಡದಲ್ಲಿಯೇ ಶಿಕ್ಷಣ ಮತ್ತು ವಸತಿಯನ್ನು ಕಲ್ಪಿಸಲಾಗಿದೆ.

ವಡವಿ ಗ್ರಾಮದಿಂದ ಸುಮಾರು 1 ಕಿಮೀ ದೂರದಲ್ಲಿ ಇರುವ ಈ ವಸತಿ ಶಾಲೆ ಕಟ್ಟಡದ ಕಾಮಗಾರಿ ಕಳಪೆಯಾಗುತ್ತಿದ್ದು, ಈ ಬಗ್ಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಗುಣಮಟ್ಟದ ಪರಿಶೀಲನೆ ಮಾಡುತ್ತಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಎಇಇ ಬಿ. ಚಂದ್ರಶೇಖರ, ಕಾಮಗಾರಿ ವಿಳಂಬವಾಗಿದ್ದು, ಇನ್ನು 15–20 ದಿನಗಳಲ್ಲಿ ಮುಗಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಪ್ರತಿಕ್ರಿಯಿಸಿ, ಈ ಬಗ್ಗೆ ರಾಜ್ಯಮಟ್ಟದ ಅಧಿಕಾರಿಗಳ ಗಮನಕ್ಕೂ ತರಲಾಗಿತ್ತು. ಶೈಕ್ಷಣಿಕ ವರ್ಷ ಪ್ರಾರಂಭಕ್ಕೆ ಲೋಕಾರ್ಪಣೆಗೊಳಿಸುವಂತೆ ಸೂಚಿಸಲಾಗಿತ್ತು. ಇದೀಗ ಮತ್ತೆ ಸಮಯ ಕೇಳುತ್ತಿದ್ದಾರೆ. ಆದಷ್ಟು ಶೀಘ್ರದಲ್ಲಿ ಉದ್ಘಾಟನೆಗೆ ಕ್ರಮ ವಹಿಸಲಾಗುವುದು ಎಂದರು.

> ಈ ಕುರಿತು ಪ್ರತಿಕ್ರಿಯಿಸಿದ ಸ್ಥಳೀಯರಾದ ರಾಜೀವರೆಡ್ಡಿ ಬಮ್ಮನಕಟ್ಟಿ, ಕಾಮಗಾರಿ ಕಳಪೆ ಮಟ್ಟದಿಂದ ನಡೆಯುತ್ತಿದೆ. ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸುತ್ತಿಲ್ಲ. ಅವಧಿ ಮೀರಿ ತಿಂಗಳಿಗೆ ಲಕ್ಷಾಂತರ ರೂ ವ್ಯಯಿಸಿ ಬಾಡಿಗೆ ಕಟ್ಟಡದಲ್ಲಿ ಶಾಲೆ ನಡೆಸಲಾಗುತ್ತಿದೆ. ಇದರಿಂದ ಸಾರ್ವಜನಿಕರ ತೆರಿಗೆ ಹಣ ವ್ಯರ್ಥವಾಗುತ್ತಿದೆ. ಈ ಭಾಗದಲ್ಲಿ ಎಸ್‌ಸಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಇದರಿಂದ ಅಡ್ಡಿಯಾಗುತ್ತಿದೆ. ಜಿಲ್ಲಾಧಿಕಾರಿಗಳು ಆದಷ್ಟು ಬೇಗ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

### ಲಿಂ.ಪಂ. ಪಂಚಾಕ್ಷರ ಗವಾಯಿಗಳವರ, ಲಿಂ.ಡಾ.ಪಂ. ಪುಟ್ಟರಾಜ ಕವಿಗವಾಯಿಗಳವರ ಪುಣ್ಯಸ್ಮರಣೋತ್ಸವ

## ಮಹಾರಥೋತ್ಸವ, ಧರ್ಮೋತ್ತೇಜಕ ಮಹಾಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರ ಗವಾಯಿಗಳವರ 80ನೇ ಪುಣ್ಯಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ, ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜೂನ್ 26ರ ಸಂಜೆ 6 ಗಂಟೆಗೆ ಮಹಾರಥೋತ್ಸವ ಹಾಗೂ ಧರ್ಮೋತ್ತೇಜಕ ಮಹಾಸಭೆ ಜರುಗಲಿದೆ.

ಅಂದು ಬೆಳಿಗ್ಗೆ 8 ಗಂಟೆಗೆ ಲಿಂ.ಪಂ. ಪಂಚಾಕ್ಷರ ಗವಾಯಿಗಳವರ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ ಭಾವಚಿತ್ರಮೆರವಣಿಗೆ ನಡೆಯಲಿದೆ. ಸಂಜೆ 4 ಗಂಟೆಗೆ ಇಲಕಲ್ಲಿನ ಆರ್. ಶರಣಬಸವ ಶಾಸ್ತ್ರಿಗಳು ಅವರಿಂದ ತಿಂಗಳಪರ್ಯಂತ ನಡೆದ ಪಂ. ಪಂಚಾಕ್ಷರ ಗವಾಯಿಗಳವರ ಮಹಾಪುರಾಣ ಮಹಾಮಂಗಲಗೊಳ್ಳುವದು.

ಸಂಜೆ 6 ಗಂಟೆಗೆ ಮಹಾರಥೋತ್ಸವ ಜರುಗುವದು. ನಂತರ ನಡೆಯುವ ಧರ್ಮೋತ್ತೇಜಕ ಮಹಾಸಭೆಯ ಸಾನ್ನಿಧ್ಯವನ್ನು ಹುಬ್ಬಳ್ಳಿಯ ಮೂರುಸಾವಿರ ಮಠದ ಪೂಜ್ಯಶ್ರೀ ಜ.ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು ವಹಿಸುವರು. ತುಮಕೂರ ಸಿದ್ದಗಂಗಾ ಶ್ರೀಮಠದ ಪೂಜ್ಯಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಗಂಗಾವತಿ ಕಲ್ಮಠದ ಕೊಟ್ಟೂರೇಶ್ವರ ಮಹಾಸ್ವಾಮಿಗಳು ನೇತೃತ್ವ ವಹಿಸುವರು. ಬಳಗಾನೂರಿನ ಪೂಜ್ಯಶ್ರೀ ಶಿವಶಾಂತವೀರ ಶರಣರು, ಚೆನ್ನಮ್ಮ ಕಿತ್ತೂರಿನ ನಿಚ್ಚಣಿಕೆಯ ಗುರು ಮಡಿವಾಳೇಶ್ವರ ಪಂಚಾಕ್ಷರ ಮಹಾಸ್ವಾಮಿಗಳು, ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಲಾಲಲಿಂಗೇಶ್ವರ ಶರಣರು, ಹಿರೇಗುಳವಾಳದ ಪೂಜ್ಯಶ್ರೀ ಹನುಮಂತಪ್ಪ ಯಾಳವಾರ ಅವರು ಸಮ್ಮುಖ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಸಿ.ಸಿ. ಪಾಟೀಲ, ಮಾಜಿ ಶಾಸಕ ಕಳಕಪ್ಪ ಬಂಡಿ, ಬಿಜೆಪಿ ಮುಖಂಡ ಅನಿಲ್ ಮೆಣಸಿಕಾಯಿ, ಗೋಕಾಕನ ಅಂಬಿಕಾ ಜಾರಕಿಹೊಳಿ, ಮುಚಕಂಡಯ್ಯನವರ ಹಂಗರಗಿ, ವೀರಬಸಯ್ಯ ರೇಣುಕಮಠ, ಧಾರವಾಡದ ಡಾ. ಜೆ.ಎಂ. ಚಂದ್ರನವರ, ಬಳ್ಳಾರಿಯ ಪುರುಷೋತ್ತಮ ಗೌಡ್ರು, ಎಂ.ಎಸ್. ಪಾಟೀಲ, ಶಿವಮೊಗ್ಗದ ಎಸ್. ಗುರುಪಂಚಾಕ್ಷರಿ, ಎನ್.ವಿ. ಕುಬೇರಪ್ಪನವರು, ಕಾರಟಗಿಯ ಮಹಾಂತಯ್ಯಸ್ವಾಮಿ, ಪಂಚಾಕ್ಷರಯ್ಯ ಹಿಡ್ಕಿಮಠ, ಕಾರಟಗಿಯ ಶರಣಪ್ಪನವರು ಕೊಟಗಿ, ಕಲ್ಲೂರಿನ ಕಳಕಪ್ಪಗೌಡ್ರ ಜಮ್ಮಾಪುರ, ಜೇವರ್ಗಿಯ ನಾಡಗೌಡ್ರು ಅಪ್ಪಾಸಾಗೌಡ್ರು, ಮುಳುವಾಡದ ಫ.ಗು. ಸಿದ್ದಾಪುರ, ಬಾದಾಮಿಯ ನಾಗರಾಜ ಕಾಚಟ್ಟಿ, ಎಸ್.ಬಿ. ಅವರಾದಿ, ರಾಚಣ್ಣ ಪಟ್ಟಣದ ಉಪಸ್ಥಿತರಿರುವರು.

ಗದುಗಿನ ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಾರ್ಥನೆ ಮಾಡುವರು. ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಬಾರ ಮನ್ನಣೆ ಮಾಡುವರು. ಅಡ್ನೂರಿನ ಎಂ.ಕಲ್ಲಿನಾಥ್ ಶಾಸ್ತ್ರಿಗಳು ಸಭಾ ನಿರೂಪಣೆ ಮಾಡುವವರು. ನಂತರ ಅಹೋರಾತ್ರಿ ಸ್ವರಸಮಾರಾಧನೆ ನಡೆಯಲಿದೆ.

> ಇದೇ ಸಂದರ್ಭದಲ್ಲಿ ಮದರಿಯ ರಾಚಯ್ಯ ಶಾಸ್ತ್ರಿ ಹಿರೇಮಠ–ಪ್ರವಚನ ಕ್ಷೇತ್ರ, ನಾಗಾವಿಯ ಲಕ್ಷ್ಮಣ ತಳವಾರ–ಗಾಯನ ಕ್ಷೇತ್ರ ಹಾಗೂ ಡಾ.ಹನುಮಂತ ಕೊಡಗಾನೂರ ಅವರಿಗೆ 'ಕುಮಾರಶ್ರೀ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿಯನ್ನು ರಾಮಣ್ಣ ಮಲ್ಲಿಗವಾಡ– (ಸಂಗೀತ ಕ್ಷೇತ್ರ) ಪ್ರದಾನ ಮಾಡಲಾಗುವುದು.
>
> ಜಗದ್ಗುರು ಮಹಾಸನ್ನಿಧಿಯವರಿಂದ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ 'ಅಷ್ಟೋತ್ತರ ಶತನಾಮಾವಳಿ' 'ಅಷ್ಟಾವರಣ ಕಥಾ ಕೀರ್ತನ ಮಾಲಿಕೆ' ಹಾಗೂ 'ಶ್ರೀಗುರು ಪುಟ್ಟರಾಜ ಚರಿತಂ(ಪುರಾಣ)' ಲೋಕಾರ್ಪಣೆಗೊಳ್ಳಲಿವೆ.

## ಯೋಗವು ಸಾಧನೆಯ ಸೋಪಾನ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸಂಸ್ಕೃತಿಯ ಹಲವು ವೈಶಿಷ್ಟ್ಯಗಳಲ್ಲಿ ಯೋಗವೂ ಒಂದಾಗಿದ್ದು, ಇದು ಪಂಚೇಂದ್ರಿಯಗಳನ್ನು ಹಿಡಿತದಲ್ಲಿಟ್ಟುಕೊಂಡು ಮನಸ್ಸು ಮತ್ತು ದೇಹದ ನಡುವೆ ಸಾಮರಸ್ಯ ಸಾಧಿಸಲು ಸಹಕಾರಿಯಾಗಿದೆ. ಹೀಗಾಗಿ, ಪ್ರಾಚೀನ ಆಚಾರ್ಯರು, ಮುನಿಗಳು, ದಾರ್ಶನಿಕರು ಯೋಗದಿಂದಲೇ ಸಕಲ ಜ್ಞಾನಗಳಲ್ಲಿ ಪಾಂಡಿತ್ಯ ಸಂಪಾದಿಸಿ ವಿಶ್ವವಂದಿತ ಯೋಗಿಗಳಾಗಿದ್ದಾರೆ ಎಂದು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಶಿವಪ್ಪ ಕುರಿ ಹೇಳಿದರು.

ಅವರು ಕಾಲೇಜಿನ ಎನ್.ಎಸ್.ಎಸ್. ಘಟಕ ಮತ್ತು ಕ್ರೀಡಾ ವಿಭಾಗ ಜಂಟಿಯಾಗಿ ಐಕ್ಯುಎಸಿ ಅಡಿಯಲ್ಲಿ ಆಯೋಜಿಸಿದ್ದ 'ಅಂತಾರಾಷ್ಟ್ರೀಯ ಯೋಗ ದಿನಾಚರಣೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ವಿದ್ಯಾರ್ಥಿಗಳು ಬೌದ್ಧಿಕ ಮತ್ತು ಭೌತಿಕವಾಗಿ ಸದೃಢವಾಗಲು ಹಾಗೂ ಅಧ್ಯಯನದಲ್ಲಿ ಏಕಾಗ್ರತೆ ಸಾಧಿಸಲು ಯೋಗವು ಮೊದಲ ಸೋಪಾನವಾಗಿದೆ. ಇದನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಸೂಚಿಸಿದರು.

ಎನ್.ಎಸ್.ಎಸ್. ಘಟಕದ ಸಂಯೋಜಕ ಮತ್ತು ಇತಿಹಾಸ ಪ್ರಾಧ್ಯಾಪಕ ಡಾ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡುತ್ತ, ಭಾರತದಲ್ಲಿ ಯೋಗದ ಪ್ರಾಚೀನತೆ, ಇತಿಹಾಸ, ಬೆಳವಣಿಗೆ, ಪುರಾಣ–ಕೃತಿ–ಕಾವ್ಯಗಳಲ್ಲಿ ಯೋಗದ ಪ್ರಸ್ತಾಪಗಳು, ಯೋಗದ ಪ್ರಸ್ತುತತೆ ಕುರಿತು ವಿವರಿಸಿದರು.

ಕ್ರೀಡಾ ವಿಭಾಗದ ನಿರ್ದೇಶಕ ಡಾ. ಬಸವರಾಜ ಅಂಬಿಗೇರ ಯೋಗದ ವಿವಿಧ ಪ್ರಕಾರಗಳು, ಯೋಗದಿಂದಾಗುವ ಪರಿಣಾಮಗಳು, ಭಾರತದ ಯೋಗ ಪದ್ಧತಿ ವಿಶ್ವದಾದ್ಯಂತ ಪ್ರಸಾರದ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬಿಜೆಪಿಯಿಂದ ಸಸಿ ನೆಡುವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜನತಾ ಪಾರ್ಟಿ ಗದಗ ನಗರ ಮಂಡಲ ವತಿಯಿಂದ ವಾರ್ಡ್ ನಂ. 5ರಲ್ಲಿರುವ ಉದ್ಯಾನವನದಲ್ಲಿ ಸಸಿಯನ್ನು ನೆಟ್ಟು ಪರಿಸರವನ್ನು ಉಳಿಸುವ ಶಪಥ ಕೈಗೊಂಡರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಪಕ್ಷದ ಆದೇಶದ ಮೇರೆಗೆ ಪ್ರತಿ ಮಂಡಲಗಳಲ್ಲಿ ತಾಯಿಯ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಎಲ್ಲ ವಾರ್ಡ್‌ಗಳಲ್ಲಿ ಹಾಗೂ ಗ್ರಾ.ಪಂ ಮಟ್ಟದಲ್ಲಿ ಮಾಡಬೇಕೆಂದು ಹೇಳಿದರು.


ಬಿಜೆಪಿ ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿ, ನಗರದಲ್ಲಿ ಬರುವ 35 ವಾರ್ಡ್‌ಗಳಲ್ಲಿ ಸಸಿ ನೆಡುವ ಕಾರ್ಯಕ್ರಮ ಜರುಗಲಿದೆ. ಇಂದು ವಾರ್ಡ್ ನಂ 5ರ ನಗರಸಭಾ ಸದಸ್ಯರಾದ ಲಕ್ಷ್ಮೀ ಶಂಕರ ಕಾಕಿ ಅವರ ನೇತೃತ್ವದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿ ಯಶಸ್ವಿಗೊಳಿಸಿರುವುದು ಹೆಮ್ಮೆಯ ವಿಷಯ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಹಿರಿಯರಾದ ಅಶೋಕ ಸಂಕಣ್ಣವರ, ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ನಗರಸಭಾ ಸದಸ್ಯರಾದ ರಾಘವೇಂದ್ರ ಯಳವತ್ತಿ, ನಾಗರಾಜ ತಳವಾರ, ಲಕ್ಷ್ಮೀ ಶಂಕರ ಕಾಕಿ, ದೇವಪ್ಪ ಗೊಟೂರ, ಸುರೇಶ ಚಿತ್ತರಗಿ, ಶಶಿಧರ ದಿಂಡೂರ, ಮಂಜುನಾಥ ಮುಳಗುಂದ, ಧರ್ಮಸಿಂಗ ರಜಪೂತ, ಶಂಕ್ರಪ್ಪ ಮಾದಗುಂಡಿ, ಜ್ಯೋತೆಕ್ಕ ದೂಳಾ ಮುಂತಾದವರು ಉಪಸ್ಥಿತರಿದ್ದರು.

### 'ಸಾಧನೆಯ ಸಿರಿ' ಗ್ರಂಥ ಸಮರ್ಪಣೆ ಸಮಾರಂಭದಲ್ಲಿ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ

## ನೇಗಲಿ ಗುರುಗಳ ಕಾರ್ಯತತ್ಪರತೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ನರೇಗಲ್



ನಮ್ಮ ವಿದ್ಯಾ ಸಂಸ್ಥೆಯಲ್ಲಿ ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ ಎಸ್.ವಿ. ನೇಗಲಿ ಗುರುಗಳು ತಮ್ಮ ಕಾರ್ಯ ತತ್ಪರತೆಯಲ್ಲಿ ನಿಪುಣರಾಗಿದ್ದರು. ಅವರ ಸೇವಾ ಅವಧಿಯಲ್ಲಿನ ಕಾರ್ಯ ತತ್ಪರತೆ ಎಂದಿಗೂ ಶ್ಲಾಘನೀಯ ಎಂದು ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ನಡೆದ ಎಸ್.ವಿ. ನೇಗಲಿ ಗುರುಗಳ 84ನೇ ಜಯಂತ್ಯುತ್ಸವ ಮತ್ತು 'ಸಾಧನೆಯ ಸಿರಿ' ಗ್ರಂಥ ಸಮರ್ಪಣೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನಮ್ಮಲ್ಲಿನ ಒಳ ಪಂಗಡಗಳು ಎಷ್ಟೇ ಇರಲಿ, ಎಲ್ಲರೂ ಒಂದಾಗಿ ಬದುಕು ಸಾಗಿಸಿದರೆ ಅದಕ್ಕೊಂದು ಅರ್ಥ ಬರುತ್ತದೆ. ಈ ದಿಶೆಯಲ್ಲಿ ಇಂದು ಇಲ್ಲಿ ಸಂಘಟನೆಗೊಂಡಿರುವ ಲಿಂಗಾಯತ ಪಂಚಮಸಾಲಿ ಸಂಘವು ತನ್ನ ಸಂಖ್ಯೆ ಎಷ್ಟು ಎಂಬುದನ್ನು ಮೊದಲು ಗಣತಿ ಮಾಡಲಿ ಎಂದು ಶ್ರೀಗಳು ತಿಳಿಸಿದರು.

ಹರಿಹರದ ಪಂಚಮಸಾಲಿ ಪೀಠದ ಶ್ರೀ ವಚನಾನಂದ ಜಗದ್ಗುರುಗಳು ಆಶೀರ್ವಚನ ನೀಡಿ, ಪಂಚಮಸಾಲಿ ಸಮಾಜವನ್ನು ಕಟ್ಟಿ ಬೆಳೆಸುವಲ್ಲಿ ನೇಗಲಿ ಗುರುಗಳ ಶ್ರಮ ಅಪಾರವಾದುದು. ಕೇವಲ ಸಮಾಜ ಸಂಘಟನೆಯೊಂದನ್ನೇ ಗುರಿಯನ್ನಾಗಿಸಿಕೊಂಡು, ರಾಜಕೀಯದ ಗೋಜಿಗೆ ಹೋಗದೆ ದುಡಿದ ನೇಗಲಿ ಗುರುಗಳ ಶ್ರಮ ಮೂವತ್ತು ವರ್ಷಗಳ ನಂತರ ಸಾರ್ಥಕ ಎನ್ನಿಸಿದೆ ಎಂದರು.

ಧಾರವಾಡ ಮುರುಘಾ ಮಠದ ಶ್ರೀ ಮಲ್ಲಿಕಾರ್ಜುನ ಶ್ರೀಗಳು, ಅಧ್ಯಕ್ಷತೆ ವಹಿಸಿದ್ದ ಡಾ. ಬಸವರಾಜ ದಿಂಡೂರ, ನಿವೃತ್ತ ಪ್ರಾಚಾರ್ಯ ಬಿ.ಎಫ್. ಚೇಗರೆಡ್ಡಿ, ಬಿ.ಎಸ್. ಶಿರೋಳ, ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಕಾರ್ಯಾಧ್ಯಕ್ಷ ಸೋಮನಗೌಡ ಪಾಟೀಲ, ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆ ಬೆಂಗಳೂರು ಅಧ್ಯಕ್ಷ ಶಿವಕುಮಾರ ಮೇಟಿ, ವಸಂತಾ ಹುಲ್ಲತ್ತಿ, ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಸಂಘದ ರಾಜ್ಯಾಧ್ಯಕ್ಷ ಜಿ.ಪಿ. ಪಾಟೀಲ, ಉಪನ್ಯಾಸಕಿ ಶಕುಂತಲಾ ಸಿಂಧೂರ, ಎಸ್.ಎಚ್. ಪಾಟೀಲ, ಸಂಘದ ನಿಕಟಪೂರ್ವ ರಾಜ್ಯಾಧ್ಯಕ್ಷ ಭಾವಿ ಬೆಟ್ಟಪ್ಪ ಮಾತನಾಡಿದರು.

ಅನಸೂಯಾ ಆಲೂರ ಭರತನಾಟ್ಯ ಪ್ರದರ್ಶನ ನೀಡಿದರು. ವೇದಿಕೆಯ ಮೇಲೆ ನೇಗಲಿ ಗುರುಗಳ ಧರ್ಮಪತ್ನಿ ಶಿವಗಂಗವ್ವ ನೇಗಲಿ, ಪ್ರಕಾಶ ಪಾಟೀಲ, ಚಂದ್ರಶೇಖರ ದಿಂಡೂರ, ಎಸ್.ಎಸ್. ಪಾಟೀಲ, ಕಳಕನಗೌಡ ಮುಂತಾದವರಿದ್ದರು. ಆರ್.ಜಿ. ಚಿಕ್ಕಮಠ ಸಾಧನೆಯ ಸಿರಿ ಗ್ರಂಥವನ್ನು ಕುರಿತು ಮಾತನಾಡಿದರು. ಸಮಾರಂಭದಲ್ಲಿ ಶಿವಗಂಗವ್ವ ನೇಗಲಿಯವರನ್ನು ಸನ್ಮಾನಿಸಲಾಯಿತು.

ಮುತ್ತಣ್ಣ ನೇಗಲಿ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಸಂಗಣ್ಣ ಗದ್ದಿ ನಿರೂಪಿಸಿದರು. ಸೋಮಣ್ಣ ಡಾಣಗಲ್ಲ ಪ್ರಾಸ್ತಾವಿಕ ನುಡಿಗಳನ್ನಾಡಿದರು.

## ದಶಮಾನೋತ್ಸವ ಆಚರಣೆಗೆ ಸಹಕರಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಬರುವ ನವಂಬರ್ ಅಥವಾ ಡಿಸೆಂಬರ್‌ನಲ್ಲಿ ಸರಕಾರಿ ನಿವೃತ್ತ ನೌಕರರ ಸಂಘ ಹಾಗೂ ಹಿರಿಯರ ಕ್ಷೇಮಾಭಿವೃದ್ಧಿ ಸಂಘದ ದಶಮಾನೋತ್ಸವವನ್ನು ಆಚರಿಸಲಾಗುವುದು ಎಂದು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ನಿವೃತ್ತ ನೌಕರರ ಹಾಗೂ ಹಿರಿಯರ ಕ್ಷೇಮಾಭಿವೃದ್ಧಿ ಸಂಘದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ನರೇಗಲ್ಲದ ಸಂಘವು ಈಗಾಗಲೇ ಹತ್ತು ವರ್ಷಗಳ ಸಮರ್ಪಕ ಸೇವೆಯನ್ನು ಪೂರೈಸಿದ್ದು, ದಶಮಾನೋತ್ಸವ ಆಚರಣೆ ಅಗತ್ಯವಾಗಿ ಆಗಬೇಕಿದೆ. ಅದಕ್ಕಾಗಿ ಈಗಿನಿಂದಲೇ ಸಿದ್ಧತೆಗಳನ್ನು ಮಾಡಿಕೊಂಡು, ಬರುವ ನವಂಬರ್ ಅಥವಾ ಡಿಸೆಂಬರ್ ತಿಂಗಳಿನಲ್ಲಿ ಈ ದಶಮಾನೋತ್ಸವವನ್ನು ಆಚರಿಸಲಾಗುವುದು. ಇದಕ್ಕೆ ಸರ್ವ ಸದಸ್ಯರೂ ಸಹಕಾರ ನೀಡಬೇಕೆಂದು ವಿನಂತಿಸಿದರು.

ಸದಸ್ಯ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ಸಂಘದ ದಶಮಾನೋತ್ಸವ ಕಾರ್ಯಕ್ಕೆ ಸದಸ್ಯರೆಲ್ಲರೂ ಕೈ ಜೋಡಿಸುತ್ತೇವೆ. ಕಾರ್ಯಕ್ರಮದ ರೂಪು–ರೇಷೆಗಳನ್ನು ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಮುಂದಿನ ಸಭೆಯಲ್ಲಿ ತಿಳಿಸಿದರೆ ಅದರಂತೆ ಕಾರ್ಯೋನ್ಮುಖರಾಗಲು ಅನುಕೂಲವಾಗುತ್ತದೆ ಎಂದು ಹೇಳಿದರು.

ವೇದಿಕೆಯ ಮೇಲೆ ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ, ಮಾಜಿ ಯೋಧ ವೀರಪ್ಪ ಕುಂಬಾರ, ಮತ್ತು ಬಿ.ಎಸ್. ಹಿರೇವಡೆಯರ ಇದ್ದರು. ಸಭೆಯಲ್ಲಿ ಬಿ.ಜಿ. ಹಳ್ಳೂರ, ಕೆ.ಕೆ. ದಾಸರ, ಎಸ್.ಬಿ. ಹಿರೇಮಠ, ವಿ.ಬಿ. ಮೇಟಿ, ಬಿ.ಎ. ಕಲಾಲಬಂಡಿ, ಕೆ.ಎಂ. ಸಂಗನಾಳ, ಎಚ್.ಕೆ. ಜೋಗಿ, ಎಸ್.ಬಿ. ಹೊಸಮನಿ, ವಿ.ಎಸ್. ಕೊಟಗಿ, ಎನ್.ಎಚ್. ಚಿಕ್ಕನಗೌಡ್ರ, ಚಂದ್ರಾಮ ಗ್ರಾಮಪುರೋಹಿತ ಮುಂತಾದವರು ಉಪಸ್ಥಿತರಿದ್ದರು. ಶಿವಯೋಗಿ ಜಕ್ಕಲಿ ಸ್ವಾಗತಿಸಿದರು. ಕಾರ್ಯದರ್ಶಿ ವಿ.ವಿ. ಕೆರಿಯವರ ನಿರೂಪಿಸಿ, ವಂದಿಸಿದರು.

## ಶಿಕ್ಷಣದಿಂದಲೇ ಸಮುದಾಯದ ಪ್ರಗತಿ

■ವಿಜಯಸಾಕ್ಷಿ ಸುದ್ದಿ, ರೋಣ




ಉತ್ತಮ ಶಿಕ್ಷಣ ಪಡೆದಾಗ ಮಾತ್ರ ಸಮಾಜ ಹಾಗೂ ಸಮುದಾಯ ಪ್ರಗತಿ ಹೊಂದಲು ಸಾಧ್ಯ ಎಂದು ಪುರಸಭೆಯ ಉಪಾಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಅವರು ಸೋಮವಾರ ಪಟ್ಟಣದ ಅಂಜುಮನ್ ಎ ಇಸ್ಲಾಂ ಶಿಕ್ಷಣ ಸಂಸ್ಥೆಯಲ್ಲಿ ಆರಂಭಿಸಿದ ನೂತನ ಪಬ್ಲಿಕ್ ಸ್ಕೂಲ್ ಉದ್ಘಾಟಿಸಿ ಮಾತನಾಡಿದರು.

ಮುಸ್ಲಿಂರು ಕೂಡ ಇತ್ತೀಚಿಗೆ ಶಿಕ್ಷಣದತ್ತ ಹೆಚ್ಚಿನ ಒಲುವು ಹೊಂದುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಸಮಾಜ ಅಭಿವೃದ್ಧಿಯತ್ತ ಸಾಗಬೇಕಾದರೆ ಶಿಕ್ಷಣ ಸಂಸ್ಥೆಗಳು ಇರಬೇಕು. ಹಾಗೆ ಅಲ್ಲಿ ಕೂಡ ಗುಣ ಮಟ್ಟದ ಅಕ್ಷರ ಜ್ಞಾನ ಮಕ್ಕಳಿಗೆ ದೊರಕಬೇಕು. ರೋಣದ ಮುಸ್ಲಿಂ ಸಮಾಜದ ಬಂಧುಗಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಮತ್ತೆ ಎಲ್‌ಕೆಜಿಯಿಂದ ಪಬ್ಲಿಕ್ ಸ್ಕೂಲ್ ಆರಂಭಿಸುತ್ತಿರುವುದು ಸ್ವಾಗತರ್ಹವಾಗಿದೆ ಎಂದರು.

ಸಾನ್ನಿಧ್ಯವನ್ನು ಹಜರತ್ ಸುಲೇಮಾನ್ ಶಾವಲಿ ಅಜ್ಜನವರು ವಹಿಸಿದ್ದರು. ಹಾಜಿ ಎ.ಎಸ್. ಖತೀಬ ಖುರಾನ್ ಪಠಿಸಿದರು. ಅಧ್ಯಕ್ಷತೆಯನ್ನು ಅಂಜುಮನ್ ಸಂಸ್ಥೆಯ ಭಾವಾಸಾಬ ಬೆಟಗೇರಿ ವಹಿಸಿದ್ದರು.

ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಯೂಸುಪ್ ಇಟಗಿ, ಮುನೀರ ಅಹ್ಮದ್, ಮಹಮ್ಮದ ಸಾಧೀಕ, ಅಯುಬ್‌ಖಾನ್, ಮಲೀಕ್ ಯಲಿಗಾರ, ಇನಾಯತ್ ತರಪದಾರ, ಎ.ಐ. ಶೇಖ ಸೇರಿದಂತೆ ಸಮಾಜದ ಮುಖಂಡರು, ಅಂಜುಮನ್ ಸಂಸ್ಥೆಯ ನಿರ್ದೇಶಕರು ಉಪಸ್ಥಿತರಿದ್ದರು.

## ಸ್ವಾಭಿಮಾನಿ ಕರ್ನಾಟಕ ರಕ್ಷಣಾ ಘಟಕದ ಪದಾಧಿಕಾರಿಗಳ ನೇಮಕ



■ವಿಜಯಸಾಕ್ಷಿ ಸುದ್ದಿ, ರೋಣ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ಉತ್ತರ ಕರ್ನಾಟಕ ಅಧ್ಯಕ್ಷ ಎಂ.ಎ. ಕುರ್ತಕೋಟಿ, ರೋಣ ತಾಲೂಕಾಧ್ಯಕ್ಷ ಎಂ.ಎಚ್. ನದಾಫ್ ಅವರ ನೇತೃತ್ವದಲ್ಲಿ ಹೊಳೆಆಲೂರಿನ ಪ್ರವಾಸಿ ಮಂದಿರದಲ್ಲಿ ಹೊಳೆಆಲೂರ ಗ್ರಾಮ ಘಟಕ, ವಿದ್ಯಾರ್ಥಿ ಘಟಕ, ತಾಲೂಕಾ ಮತ್ತು ಜಿಲ್ಲಾ ಪದಾಧಿಕಾರಿಗಳನ್ನು ಆಯ್ಕೆ ಮಾಡಿ, ನೇಮಕದ ಆದೇಶಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಯಚ್ಚರೇಶ್ವರ ಮಹಾಸ್ವಾಮೀಜಿ, ಸಂಘಟನೆಯನ್ನು ಬಲಿಷ್ಠಗೊಳಿಸಿ ಅನ್ಯಾಯದ ವಿರುದ್ಧ ಧ್ವನಿ ಎತ್ತುವ ಮುಖಾಂತರ ಜನರಿಗೆ ನ್ಯಾಯ ಕೊಡಿಸುವ ಭರವಸೆಯನ್ನು ಮೂಡಿಸಬೇಕು ಎಂದು ಹೇಳಿದರು.

ಉತ್ತರ ಕರ್ನಾಟಕ ಗೌರವಾಧ್ಯಕ್ಷ ಶ್ರೀ ದಿವಾನ್ ಶರೀಫ್ ಶ್ರೀಮುರುಗೇಂದ್ರ ಸ್ವಾಮೀಜಿ ಶಾಂತಿಧಾಮ, ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರ್ತುಜಾಗೌಂಡಿ, ರೋಣ ತಾಲೂಕು ಉಪಾಧ್ಯಕ್ಷ ಬಸವರಾಜ ಹಾದಿಮನಿ, ರೋಣ ತಾಲೂಕಾ ಪ್ರಧಾನ ಕಾರ್ಯದರ್ಶಿಯಾಗಿ ಲಿಯಾಕತ್ ಅಂಗಡಿಗೇರಿ, ರೋಣ ತಾಲೂಕಾ ವಿದ್ಯಾರ್ಥಿ ಘಟಕದ ಉಪಾಧ್ಯಕ್ಷ ಸಂಕೇತ ದಾನರೆಡ್ಡಿ, ನೂತನ ವಿದ್ಯಾರ್ಥಿ ಘಟಕ ಅಧ್ಯಕ್ಷ ಬಾಬು ಮುಲ್ಲಾ, ಉಪಾಧ್ಯಕ್ಷ ಶರೀಫ ನದಾಫ, ಪ್ರಧಾನ ಕಾರ್ಯದರ್ಶಿ ಸಂತೋಷ ರಾಜಪುರೋಹಿತ್, ವಿದ್ಯಾರ್ಥಿ ಘಟಕದ ಅಧ್ಯಕ್ಷ ಸಂಜು ಮಾದರ್, ಉಪಾಧ್ಯಕ್ಷ ಕಾರ್ತಿಕ್ ಬಡಿಗೇರ್, ಊರಿನ ಮುಖಂಡರಾದ ವಾಸುದೇವ್ ಪವಾರ್, ಮೋತಿಲಾಲ್ ರಾವಲ್, ಮೌಲಾನ ಅಬ್ದುಲ್ ಲತೀಫ್, ಯಮನೂರ್ ನದಾಫ್, ಎಂ.ಎಸ್. ಬಹಾದೂರಖಾನ, ನಿಖಿಲ್ ಕಡೇಮನಿ, ಹನುಮಂತ್ ಹಳ್ಳಿಕೇರಿ, ಖಾಜಾ ಜಕ್ಕಲಿ, ಅರುಣ್ ಪೂಜಾರ್ ಮೈಬು ನದಾಫ್, ರಂಗಪ್ಪ ಬಾರಕೇರ, ಹನುಮಂತ್, ಪೀರಸಾಬ ನದಾಫ, ದೇವರಾಜ ಅಂಬಿಗೇರ ಮಾಬುಸಾಬ್ ಚಾಚಾ, ಪ್ರಕಾಶ್, ಅಡಿವೆಪ್ಪ ಮುಂತಾದವರು ಉಪಸ್ಥಿತರಿದರು.

## ಜೂ. 29ರಂದು ಉದ್ಯಮಶೀಲತಾ ತಿಳುವಳಿಕೆ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರರ(ಸಿಡಾಕ್) ಧಾರವಾಡ ಇವರು ಸ್ವಂತ ಉದ್ಯೋಗ ಕೈಗೊಳ್ಳಲು ಆಸಕ್ತಿ ಇರುವ ನಿರುದ್ಯೋಗ ಯುವಕ/ಯುವತಿಯರಿಗೆ ಹಾಗೂ ಮಹಿಳೆಯರಿಗೆ 1 ದಿನದ ಉದ್ಯಮ ಶೀಲತಾ ತಿಳುವಳಿಕೆ ಶಿಬಿರವನ್ನು ಜೂನ್ 29 ರಂದು ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳ ಗದಗನಲ್ಲಿ ಏರ್ಪಡಿಸಲಾಗುವುದು.

ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸುವ ಆಸಕ್ತರಿಗೆ ಪ್ರೇರೇಪಣೆ , ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ ಪ್ರೋತ್ಸಾಹ, ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಇತ್ಯಾದಿ ವಿಷಯಗಳ ಕುರಿತು ಮಾಹಿತಿ ನೀಡಲಾಗುವುದು.

ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬಹುದು. ಭಾಗವಹಿಸುವವರು ಕನಿಷ್ಠ 18 ವರ್ಷದವರಾಗಿರಬೇಕು. ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು. ಮಹಿಳೆಯರಿಗೆ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ,ರೂಂ ನಂ. 106 , ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

**ಶಾಂತಾದೇವಿ ಕಣವಿ ಕಥಾ ಬಹುಮಾನ ಘೋಷಣೆ**

## ಅಂದಯ್ಯ ಅರವಟಗಿಮಠ ಪ್ರಥಮ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಡ.ಸ. ಹಡಗಲಿ ಗ್ರಾಮದ ಅಂದಯ್ಯ ಅರವಟಗಿಮಠ ಅವರು ಗದಗ ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಕನ್ನಡ ಉಪನ್ಯಾಸಕರಾಗಿದ್ದು, ಅವರು ಬರೆದ 'ದೈವ ದೈವಗಳಾಚೆ' ಕಥೆಗೆ ಕರ್ನಾಟಕ ವಿದ್ಯಾವರ್ಧಕ ಸಂಘ ಧಾರವಾಡವು ಈಚೆಗೆ ಏರ್ಪಡಿಸಿದ್ದ ನಾಡೋಜ ಡಾ. ಚೆನ್ನವೀರ ಕಣವಿ ಮತ್ತು ಶ್ರೀಮತಿ ಶಾಂತಾದೇವಿ ಕಣವಿ ದತ್ತಿ ಕಥಾ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಲಭಿಸಿದೆ.

ಕನ್ನಡದ ಹೆಸರಾಂತ ಕಥೆಗಾರರರು ನಿರ್ಣಯಿಸಿದ ಬಹುಮಾನವನ್ನು ಹಿರಿಯ ಬರಹಗಾರರಾದ ಡಾ. ಲೋಹಿತ್ ಡಿ.ನಾಯ್ಕರ್ ಮತ್ತು ವಿಮರ್ಶಕರಾದ ಎಸ್. ಆರ್. ವಿಜಯಶಂಕರ ಅವರು ಜೂನ್ 28ರ ಸಂಜೆ 6ಕ್ಕೆ ಧಾರವಾಡದ ಕರ್ನಾಟಕದ ವಿದ್ಯಾವರ್ಧಕ ಸಂಘದ ರಾ.ಹ. ದೇಶಪಾಂಡೆ ಸಭಾ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ವಿತರಿಸಲಿದ್ದಾರೆ. ಈ ಸಂದರ್ಭದಲ್ಲಿ ನಿರ್ಣಾಯಕರ ನುಡಿಗಳನ್ನು ಶ್ರೀಧರ ಗಸ್ತಿ ನುಡಿಯಲಿದ್ದು, ಪ್ರೊ. ಮಾಲತಿ ಪಟ್ಟಣಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಶಿವಾನಂದ ಕಣವಿ, ಕರುಣ ಪ್ರಸಾದ ಕಣವಿ, ರಂಜನಾ, ಡಾ. ಅಶೋಕ ಗೋದಿ ಉಪಸ್ಥಿತರಿರುತ್ತಾರೆ.

ಅಭಿನಂದನೆ-ಕಥಾ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಪಡೆದ ಅಂದಯ್ಯ ಅರವಟಗಿಮಠ ಅವರನ್ನು ಗದಗನ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷರಾದ ರಜನಿ ಪಾಟೀಲ್, ಪ್ರಾಚಾರ್ಯ ಡಾ. ಎ.ಕೆ. ಮಠ, ಉಪ ಪ್ರಾಚಾರ್ಯೆ ಡಾ. ವೀಣಾ ಮತ್ತು ಮಹಾವಿದ್ಯಾಲಯದ ಸಮಸ್ತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿ ವೃಂದ, ನರೇಗಲ್ಲ ಬೀಚಿ ಬಳಗದ ಅಧ್ಯಕ್ಷರಾದ ಕೆ.ಎಸ್. ಕಳಕಣ್ಣವರ ಮತ್ತು ಸದಸ್ಯರು, ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಡಿ.ಎ. ಅರವಟಗಿಮಠ ಮತ್ತು ಸದಸ್ಯರು ಬಹುಮಾನಿತರನ್ನು ಹಾರ್ದಿಕವಾಗಿ ಅಭಿನಂದಿಸಿದ್ದಾರೆ.

## ಇಂದು ಮಾದಕ ವ್ಯಸನ, ಅಕ್ರಮ ಕಳ್ಳಸಾಗಣಿ ವಿರುದ್ಧದ ಅಂತಾರಾಷ್ಟ್ರೀಯ ದಿನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಜಿಲ್ಲಾ ಪೊಲೀಸ್ ಇಲಾಖೆ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಾರ್ತಾ ಇಲಾಖೆ, ಜಿಲ್ಲಾ ಕಾರಾಗೃಹ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಆದರ್ಶ ಶಿಕ್ಷಣ ಸಮಿತಿಯ ವಿ.ಆರ್.ಕುಷ್ಟಗಿ ಮೆಮೊರಿಯಲ್ ವಾಣಿಜ್ಯ ಮಹಾವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನೆ ಘಟಕ ಹಾಗೂ ರೆಡ್ ಕ್ರಾಸ್ ಇವರ ಸಂಯುಕ್ತ ಆಶ್ರಯದಲ್ಲಿ ಮಾದಕ ವ್ಯಸನ ಮತ್ತು ಅಕ್ರಮ ಕಳ್ಳಸಾಗಣಿ ವಿರುದ್ಧದ ಅಂತರಾಷ್ಟ್ರೀಯ ದಿನ-2024 ಸಮಾರಂಭವನ್ನು ಜೂನ್ 26 ರಂದು ಬೆಳಿಗ್ಗೆ 10 ಗಂಟೆಗೆ ಗದಗನ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್.ಕುಷ್ಟಗಿ ಮೆಮೋರಿಯಲ್ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಾಬಾಸಾಹೇಬ ನೇಮಗೌಡ ಉದ್ಘಾಟಿಸುವರು. ಆದರ್ಶ ಶಿಕ್ಷಣ ಸಮಿತಿಯ ಚೇರಮನ್ ಆನಂದ ಪೋತ್ನೀಸ್ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಆಗಮಿಸುವರು.

ಜಿಮ್ಸ್ ದ ಸಹಾಯಕ ಪ್ರಾಧ್ಯಾಪಕರಾದ ಡಾ.ಆನಂದ ಕೆ ಉಪನ್ಯಾಸ ನೀಡುವರು.

ಅತಿಥಿಗಳಾಗಿ ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ ಕೆ.ಎಸ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ಕೆ. ಭಜಂತ್ರಿ, ಜಿಲ್ಲಾ ಕ್ಷಯ ರೋಗ ನಿಯಂತ್ರಣ ಅಧಿಕಾರಿ ಡಾ. ಅರುಂಧತಿ ಕೆ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ್ ರಾಠೋಡ್ , ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರೀತ್ ಖೋನಾ ಆಗಮಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್.ನೀಲಗುಂದ, ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯರಾದ ಡಾ.ವರ್ಷಾ ಅಂಗಡಿ, ಜಿಲ್ಲಾ ಕುಷ್ಟರೋಗ ನಿಯಂತ್ರಣ ಅಧಿಕಾರಿ ಡಾ.ರಾಜೇಂದ್ರ ಬಸರಿಗಿಡದ ಸ್ವಾಗತ ಕೋರಿದ್ದಾರೆ.

**ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ**

# ಗ್ಯಾರಂಟಿ ಯೋಜನೆಯಿಂದ ಸರ್ಕಾರ ದಿವಾಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಹಾಗೂ ದಿನನಿತ್ಯದ ವಸ್ತುಗಳ ಬೆಲೆ ಏರಿಕೆ ಖಂಡಿಸಿ, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಘಟಕದಿಂದ ಮಂಗಳವಾರ ಬಸ್ ನಿಲ್ದಾಣದ ಎದುರಿನಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿ, ರಾಜ್ಯ ಸರ್ಕಾರಕ್ಕೆ ತಹಸೀಲ್ದಾರರ ಮೂಲಕ ಮನವಿ ಸಲ್ಲಿಸಿದರು.

ಬಸ್ ನಿಲ್ದಾಣದ ಎದುರಿನ ರಸ್ತೆಯಲ್ಲಿ ಜಮಾಯಿಸಿದ್ದ ಬಿಜೆಪಿಯ ನೂರಾರು ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗಿದರು. ಪ್ರತಿಭಟನೆಯಲ್ಲಿ ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ಅಸ್ತಿತ್ವಕ್ಕೆ ಬಂದ ಮೇಲೆ ಎಲ್ಲ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದೆ. ಅಲ್ಲದೆ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಪರಿಶಿಷ್ಟರಿಗೆ ಮೀಸಲಾಗಿರುವ ಸಾವಿರಾರು ಕೋಟಿ ರೂ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಇದನ್ನು ನೋಡಿದಾಗ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಪೊಳ್ಳು ಗ್ಯಾರಂಟಿಗಳನ್ನು ಈಡೇರಿಸಲು ರಾಜ್ಯವನ್ನು ಕೊಳ್ಳೆ ಹೊಡೆಯುತ್ತಿದ್ದಾರೆ ಎಂದು ಆರೋಪಿಸಿದರು.



ಈಗಾಗಲೇ ಜನಸಾಮಾನ್ಯರು ಉಪಯೋಗಿಸುವ ಹಾಲು, ವಿದ್ಯುತ್, ಸ್ಟಾಂಪ್ ಡ್ಯೂಟಿ, ವಾಹನ ನೋಂದಣಿ ಸೇರಿದಂತೆ ರೈತರು ಉಪಯೋಗಿಸುವ ಬಿತ್ತನೆ ಬೀಜ, ಪಹಣಿ ಪತ್ರ, ಆಸ್ತಿಗಳ ನೋಂದಣಿ ಶುಲ್ಕ, ಇಂಜಿನಿಯರಿಂಗ್ ಪ್ರವೇಶ ಶುಲ್ಕ, ವಾಹನಗಳ ಮೇಲೆ ತೆರಿಗೆ ಸೇರಿದಂತೆ ಹತ್ತಾರು ಬೆಲೆ ಏರಿಕೆ ಜೊತೆಗೆ ಪೆಟ್ರೋಲ್ ಡೀಸೆಲ್ ದರ ಏರಿಕೆ ಮಾಡಿರುವುದು ಸರ್ಕಾರ ದಿವಾಳಿಯಾಗಿದೆ ಎಂದು ನಿರೂಪಿಸುತ್ತಿದೆ. ಸರ್ಕಾರ ಕೂಡಲೇ ಬೆಲೆ ಏರಿಕೆ ನಿರ್ಧಾರ ಕೈಬಿಡಬೇಕು. ಇಲ್ಲವಾದರೆ ಬಿಜೆಪಿ ಕಾರ್ಯಕರ್ತರು ಹಳ್ಳಿ ಹಳ್ಳಿಗಳಲ್ಲಿ ಹೋರಾಟ ನಡೆಸಲಿದ್ದಾರೆ ಎಂದರು.

ಗದಗ ಜಿಲ್ಲಾ ರೈತ ಮೋರ್ಚಾ ಮುಖಂಡ ಡಿ.ವೈ. ಹುನಗುಂದ, ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಅಶೋಕ ಶಿರಹಟ್ಟಿ, ಎಂ.ಆರ್. ಪಾಟೀಲ, ಅಶೋಕ ಪಲ್ಲೇದ ಮಾತನಾಡಿ, ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ಜನರಿಗೆ ಉಚಿತ ಭಾಗ್ಯಗಳನ್ನು ನೀಡಿ ಮತ್ತೊಂದು ಕೈಯಿಂದ ಎರಡು ಪಟ್ಟು ಹಣ ತೆರಿಗೆ ಮೂಲಕ ಕಿತ್ತುಕೊಳ್ಳುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕಳೆದ 12 ತಿಂಗಳಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಂಡಿಲ್ಲ. ಗ್ಯಾರಂಟಿ ಯೋಜನೆಯಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಮಾಡಿ, ಬಸ್ ದರ ಹೆಚ್ಚಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಅನಿಲ ಮುಳಗುಂದ, ಗಂಗಾಧರ ಮೆಣಸಿನಕಾಯಿ, ದುಂಡೇಶ ಕೊಟಗಿ, ಶಿವಯೋಗಿ ಅಂಕಲಕೋಟಿ, ಮಂಜುನಾಥ ಗೊರವರ, ನಿಂಗಪ್ಪ ಬನ್ನಿ, ನೀಲಪ್ಪ ಹತ್ತಿ, ಬಸವರಾಜ ಚಕ್ರಸಾಲಿ, ಗಿರೀಶ ಚೌರಡ್ಡಿ, ಮುತ್ತಣ್ಣ ಚೋಟಗಲ್, ಬಾಬಣ್ಣ ವೇರ್ಣೆಕರ, ಪ್ರಕಾಶ ಮಾದನೂರ, ಶಕ್ತಿ ಕತ್ತಿ, ಸಂತೋಷ ಜಾವೂರ, ತುಕ್ಕಪ್ಪ ಪೂಜಾರ, ಚನ್ನಪ್ಪ ಕರೆಯತ್ತಿನ, ಈರಣ್ಣ ಪೂಜಾರ, ಜಗದೀಶಗೌಡ ಪಾಟೀಲ, ನಾಗರಾಜ ಹುನಗುಂದ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್ಐ ಈರಪ್ಪ ರಿತ್ತಿ ಸೂಕ್ತ ಬಂದೋಬಸ್ತ್ ಒದಗಿಸಿದ್ದರು.

> ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ಸಚಿವರಿಗೆ ಅನುದಾನ ದೊರೆಯುತ್ತಿಲ್ಲ. ಯಾವುದೇ ಸಚಿವರನ್ನು ಭೇಟಿಯಾಗಿ ಅನುದಾನಕ್ಕೆ ಮನವಿ ಮಾಡಿದರೆ ಅಲ್ಲಿ ಇಲ್ಲ ಎನ್ನುವ ಉತ್ತರ ಸಿದ್ಧವಾಗಿರುತ್ತದೆ. ಗ್ಯಾರಂಟಿಗಳಿಗೆ ಹಣ ಹೊಂದಿಸುವ ನಿಟ್ಟಿನಲ್ಲಿ ಸರಕಾರ ಅಭಿವೃದ್ಧಿ ಕಾರ್ಯಗಳಿಗೆ ತಿಲಾಂಜಲಿ ಇಟ್ಟಿದೆ. 14-15 ಬಜೆಟ್‌ಗಳನ್ನು ಮಂಡಿಸಿದ್ದ ಸಿಎಂ ಸಿದ್ದರಾಮಯ್ಯನವರು ರಾಜ್ಯಕ್ಕೆ ನೀಡಿದ ಕೊಡುಗೆ ಶೂನ್ಯವಾಗಿದೆ.
>
> **- ಡಾ. ಚಂದ್ರು ಲಮಾಣಿ,** ಶಾಸಕರು.

# ಪುಣ್ಯಾಶ್ರಮದಲ್ಲಿ ರಕ್ತದಾನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರ ಗವಾಯಿಗಳವರ 80ನೇ ಪುಣ್ಯಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ, ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ರಕ್ತದಾನ ಶಿಬಿರ ಜರಗುತು.




ಈ ಸಂದರ್ಭದಲ್ಲಿ ಹುಬ್ಬಳ್ಳಿ ಸಿದ್ಧಾರೂಢ ಸ್ವಾಮಿ ಮಠದ ಧರ್ಮದರ್ಶಿ ಸಿದ್ದನಗೌಡ ಪಾಟೀಲ, ಪಿ.ಸಿ. ಹಿರೇಮಠ, ವರ್ತಕ ಹುಬ್ಬಳ್ಳಿಮಠ, ರಾಮನಹಳ್ಳಿ, ಬೂದಿಹಾಳ, ಮಂಜುನಾಥ ಹೇಮರಡ್ಡಿ, ಗವಿಸಿದ್ದೇಶ್ವರ ಯಾದಗಿರಿ ರಾಚಯ್ಯಶಾಸ್ತ್ರಿ ಹಿರೇಮಠ, ಹರ್ಲಾಪೂರದ ಸದಾನಂದ ಶಾಸ್ತ್ರಿಗಳು, ರೋಣದ ಶಶಿಧರ ಶಾಸ್ತ್ರಿಗಳು, ದತ್ತು ವೈಕುಂಠೆ, ರುದ್ರಪ್ಪ ಚವ್ಹಾಣ, ಕಾಲಿಸಾಬ, ಸುನಿಲ್, ಹಾಗೂ ಅಂಬಿಕಾ ರಕ್ತ ನಿಧಿ ಕೇಂದ್ರದ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಅಂಜುಮನ್-ಏ-ಇಸ್ಲಾಂ ಕಮಿಟಿಯ ಚುನಾವಣೆ**

# ಗ್ಯಾರಂಟಿ ಯೋಜನೆ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ಥಳೀಯ ಅಂಜುಮನ್-ಏ-ಇಸ್ಲಾಂ ಸಂಸ್ಥೆ ಮುಳಗುಂದ ಪಟ್ಟಣದ ಕಮಿಟಿಯ ಚುನಾವಣೆ ಅಂಗವಾಗಿ ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಮಹತ್ವದ ಪಂಚ ಗ್ಯಾರಂಟಿ ಯೋಜನೆಗಳನ್ನು ಪಟ್ಟಣದ ಹಿರಿಯರು ಹಾಗೂ ಮುಖಂಡರು ಬಿಡುಗಡೆ ಮಾಡಿದರು.



ಪಂಚ ಗ್ಯಾರಂಟಿ ಯೋಜನೆಗಳಾದ ಮುಸ್ಲಿಂ ಸಮುದಾಯದ ಜನಗಣತಿ, ಅಂಜುಮನ್ ಬೈಲಾ ತಿದ್ದುಪಡಿ, ಉರ್ದು ಸರಕಾರಿ ಶಾಲಾ ಮಕ್ಕಳಿಗೆ ಬಸ್ ವ್ಯವಸ್ಥೆ, ಜಶ್ನೆ-ಏ-ಈದ ಮಿಲಾದುನ್ನಬಿ ಸಂಭ್ರಮಾಚರಣೆ, ಬಡ ಮಕ್ಕಳ ಶೈಕ್ಷಣಿಕ ದತ್ತು ಮತ್ತು ಅತಿ ಬಡ ಹೆಣ್ಣು ಮಕ್ಕಳ ಮದುವೆ ಯೋಜನೆಗಳು ಮುಸ್ಲಿಂ ಸಮುದಾಯದ ಜನರ ಅಭಿವೃದ್ಧಿ ಹಾಗೂ ಸಮಾಜದ ಅಭಿವೃದ್ಧಿಯ ಕುರಿತಂತೆ ಮಾಡಲಾಗಿದ್ದು, ಈ ಯೋಜನೆಗಳನ್ನು ಜಾರಿಗೆ ತರುವುದು ನಮ್ಮ ಜವಾಬ್ದಾರಿಯಾಗಿದೆ. ಆದ್ದರಿಂದ ತಮ್ಮ ಮತಗಳನ್ನು ನಮಗೆ ನೀಡಿ ಸಂಪೂರ್ಣ ಬಹುಮತದಿಂದ ಆರಿಸಿ ತರಬೇಕೆಂದು ಮತದಾರ ಬಾಂಧವರಲ್ಲಿ ವಿನಂತಿಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ವಿಜಯಕುಮಾರ ನೀಲಗುಂದ, ಅಶೋಕ ಹುಣಸಿಮರದ, ಪಕ್ರುಸಾಬ ಇಮಾಮಸಾಬ, ಅಬ್ದುಲಖಾದರ ದುರ್ಗಿಗುಡಿ, ಎಚ್.ಎಂ, ನದ್ದೀಮುಲ್ಲಾ ಇಮಾಮಸಾಬ ಖವಾಸ, ಇಬ್ರಾಹಿಂಸಾಬ ಹಣಗಿ, ಮುನ್ನಾ ದುರ್ಗಿಗುಡಿ, ಮುಸ್ತಾಕ ಅಕ್ಕಿ, ಜಿಲಾನಿ ಮಾಬುಸಬಾನಿ, ಮುಜಾವರ ಚಾಂದಸಾಬ ಅಕ್ಕಿ, ಶರೀಫಸಾಬ ಒಚಿಟಿ, ಇಮಾಮಹುಸೇನ ಮುಜಾವರ, ಡಿ.ಡಿ. ಮುಜಾವರ, ಹಸನಸಾಬ ಹೊಸೂರ ಹಾಗೂ ವಿವಿಧ ಜಮಾತಿನ ಗುರು-ಹಿರಿಯರು ಭಾಗವಹಿಸಿದ್ದರು.

**ಕರ್ನಾಟಕ ಸಂಭ್ರಮ-50ರ ಅಂಗವಾಗಿ ಜ್ಯೋತಿ ರಥಯಾತ್ರೆ**

# ನಗರದಲ್ಲಿ ರಥಯಾತ್ರೆಗೆ ಭವ್ಯ ಸ್ವಾಗತ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಂಭ್ರಮ-50ರ ಪ್ರಯುಕ್ತ ಜ್ಯೋತಿ ರಥಯಾತ್ರೆಯು ಜಿಲ್ಲೆಯ ಗಜೇಂದ್ರಗಡದಿಂದ ಬೆಟಗೇರಿಯ ಮೂಲಕ ಗದಗ ನಗರಕ್ಕೆ ಸೋಮವಾರ ಆಗಮಿಸಿತು. ಭವ್ಯ ಸ್ವಾಗತದೊಂದಿಗೆ ನಗರದ ಭೂಮರಡ್ಡಿ ವೃತ್ತದಲ್ಲಿ ರಥಯಾತ್ರೆಗೆ ಪೂಜೆ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಪ್ರೊ. ಕೆ.ಎಚ್. ಬೇಲೂರ ಸೇರಿದಂತೆ ಗಣ್ಯರು, ಹಿರಿಯರು, ಶಾಲಾ ಮಕ್ಕಳು ರಥಯಾತ್ರೆಯಲ್ಲಿ ಭಾಗವಹಿಸಿದ್ದರು.

ಭೂಮರೆಡ್ಡಿ ವೃತ್ತದಿಂದ ರಥಯಾತ್ರೆಯು ನಗರದ ಹಳೇ ಡಿಸಿ ಆಫೀಸ್, ಭೀಷ್ಮ ಕೆರೆ, ಚೆನ್ನಮ್ಮ ವೃತ್ತ, ಮುಳಗುಂದ ನಾಕಾ ಮಾರ್ಗವಾಗಿ ನಗರದ ಜಿಲ್ಲಾಡಳಿತ ಭವನಕ್ಕೆ ಬಂದು ತಲುಪಿತು. ಮಂಗಳವಾರ ರಥಯಾತ್ರೆಯನ್ನು ಮುಂಡರಗಿ ತಾಲೂಕಿಗೆ ಬೀಳ್ಕೊಡಲಾಯಿತು.

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷಗಳು ಪೂರ್ಣಗೊಂಡ ನಿಮಿತ್ತ ಕರ್ನಾಟಕ ಸರ್ಕಾರವು ಹಮ್ಮಿಕೊಂಡ 'ಕರ್ನಾಟಕ ಸಂಭ್ರಮ-50'ರ ಕಾರ್ಯಕ್ರಮದ ಅಂಗವಾಗಿ ಜ್ಯೋತಿ ರಥಯಾತ್ರೆಯು ರಾಜ್ಯಾದ್ಯಂತ ಸಂಚರಿಸುತ್ತಿದೆ.

## ಉದ್ದಿಮೆ ಪರವಾನಿಗೆ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಸ್ತ ಅಂಗಡಿ, ವ್ಯಾಪಾರ, ಉದ್ದಿಮೆ ಹಾಗೂ ಇತರೆ ವಹಿವಾಟು ನಡೆಸುವ ಮಾಲೀಕರಿಗೆ ತಿಳಿಸುವುದೇನೆಂದರೆ ಕರ್ನಾಟಕ ಪೌರಸಭೆಗಳ ಅಧಿನಿಯಮದಡಿ ಸೂಚಿಸುವಂತಹ ಯಾವುದೇ ಅಂಗಡಿ ವ್ಯಾಪಾರ, ಉದ್ದಿಮೆ ಹಾಗೂ ಇತರೆ ವಹಿವಾಟು ನಡೆಸುತ್ತಿದ್ದಲ್ಲಿ ನಗರಸಭೆಯಿಂದ ಪ್ರಸ್ತುತ ಪರವಾನಗಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಈಗಾಗಲೇ ಲೈಸನ್ಸ್ ಪಡೆದವರು 2023-24ನೇ ಸಾಲಿನ ಚಾಲ್ತಿ ಅವಧಿ ಮುಗಿದಿರುತ್ತದೆ. ಆದರೆ ವ್ಯಾಪಾರಸ್ಥರು ತಮ್ಮ ಲೈಸನ್ಸ್‌ನ್ನು ಇನ್ನೂವರೆಗೂ ನವೀಕರಿಸಿಕೊಂಡಿರುವುದಿಲ್ಲ. 2024-25ನೇ ಚಾಲ್ತಿ ಸಾಲಿನ ವರ್ಷದ ಅವಧಿಯು ಪ್ರಾರಂಭವಾಗಿದ್ದು. ಕಾರಣ ಲೈಸನ್ಸ್‌ಗಳನ್ನು ನವೀಕರಿಸಿಕೊಳ್ಳಬೇಕು. ಅನಧಿಕೃತವಾಗಿ ವ್ಯಾಪಾರ ಹಾಗೂ ಉದ್ದಿಮೆ ಮತ್ತು ಇತರೆ ವಹಿವಾಟು ಮಾಡುವ ವ್ಯಾಪಾರಸ್ಥರು ಲೈಸನ್ಸ್ ಪಡೆಯದೇ ಇದ್ದವರು ಸೂಕ್ತ ದಾಖಲೆಗಳಾದ ಉತಾರ, ಸನ್ 2024-25ರ ಕಂದಾಯ ತುಂಬಿದ ರಶೀದಿ, ಆಧಾರ್ ಕಾರ್ಡ್ ಅಥವಾ ಗುರುತಿನ ಚೀಟಿ, ಬಾಡಿಗೆ ಕರಾರು ಪತ್ರದ ಝರಾಕ್ಸ್ ಪ್ರತಿಗಳು ಹಾಗೂ ಪಾಸ್ ಪೋರ್ಟ್ ಸೈಜ್ ಫೋಟೋ, ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 30 ರೊಳಗೆ ವ್ಯಾಪಾರ ವಹಿವಾಟು ಮಾಡಲು ಆನ್‌ಲೈನ್ ತಂತ್ರಾಂಶದ ಮೂಲಕ ಸೃಜಿಸಿದ ಡಿಜಿಟಲ್ ಸಹಿಯುಳ್ಳ ಉದ್ದಿಮೆ ಪರವಾನಿಗೆ ಪತ್ರವನ್ನು ಕಡ್ಡಾಯವಾಗಿ ಪಡೆದುಕೊಂಡು ವ್ಯಾಪಾರ ಮಾಡಲು ತಿಳಿಸಿದೆ.

ಇದಕ್ಕೆ ತಪ್ಪಿದಲ್ಲಿ 1964ನೇ ಕರ್ನಾಟಕ ಪೌರಸಭಾ ಅಧಿನಿಯಮದನ್ವಯ ದಂಡ ವಿಧಿಸುವುದಲ್ಲದೆ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲು ಮಾಡಲಾಗುವುದು. ಇಂತಹ ಅಹಿತಕರ ಘಟನೆಗಳಿಗೆ ಅವಕಾಶ ಕಲ್ಪಿಸದೆ ಸಮಸ್ತ ಅಂಗಡಿ, ವ್ಯಾಪಾರ, ಉದ್ದಿಮೆ ಹಾಗೂ ಇತರೆ ಪರವಾನಿಗೆಯನ್ನು 2024-25 ನೇ ಸಾಲಿನವರೆಗೆ ನವೀಕರಿಸಿಕೊಳ್ಳಬೇಕು. ಅನಧಿಕೃತವಾಗಿ ವ್ಯಾಪಾರ ಹಾಗೂ ಉದ್ದಿಮೆ ಮತ್ತು ಇತರೆ ವಹಿವಾಟು ಮಾಡುವ ವ್ಯಾಪಾರಸ್ಥರು ಲೈಸನ್ಸ್ ಪಡೆದು ವ್ಯಾಪಾರ ಮಾಡಿಕೊಳ್ಳಬೇಕು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೈಗಂಬರ್‌ವಾಸಿ

**ರಾಜೇಸಾಬ ಡಂಖೇದ**



ಗದಗ: ಇಲ್ಲಿನ ತಾಜನಗರದ ತಾಜ್ ಮಸ್ಜಿದ್ ಹತ್ತಿರದ ನಿವಾಸಿ ರಾಜೇಸಾಬ ಹುಸೇನಸಾಬ ಡಂಖೆದ (86) ಮಂಗಳವಾರ ಸಂಜೆ ನಿಧನರಾದರು.

ಮೃತರು ಪತ್ನಿ, ನಾಲ್ವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಬುಧವಾರ ದಿ.26 ರಂದು ಮಧ್ಯಾಹ್ನ (ಜೋಹರ್ ನಮಾಜ್) ನಂತರ ಡಂಬಳನಾಕಾದ ಬಳಿ ಇರುವ ಫಿರ್ದೋಸ್ ಮಸ್ಜಿದ್ ಬಳಿ ಜರುಗುವುದು ಎಂದು ಮೃತರ ಪುತ್ರ ರಜಾಕ್ ಡಂಖೇದ ತಿಳಿಸಿದ್ದಾರೆ.

## ನಿಧನ ವಾರ್ತೆ

**ಬಸವಣ್ಣೆಮ್ಮ ಈಶ್ವರಪ್ಪ ಬೆಂಡಿಗೇರಿ**



ಅಣ್ಣಿಗೇರಿ: ಶಿಕ್ಷಣ ದಾಸೋಹಿ, ಅಣ್ಣಿಗೇರಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ವಾಯ್ಸ್ ಚೇರಮನ್ ನಿಜಲಿಂಗಪ್ಪ ಹುಬ್ಬಳ್ಳಿ ಅವರ ಪುತ್ರಿ, ಪಟ್ಟಣದ ಹಿರಿಯರಾದ ಸ್ಥಳೀಯ ವಿದ್ಯಾನಗರ ನಿವಾಸಿ ಬಸವಣ್ಣೆಮ್ಮ ಈಶ್ವರಪ್ಪ ಬೆಂಡಿಗೇರಿ (97) ಮಂಗಳವಾರ ನಿಧನರಾದರು.

ಅವರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ. ಬಸವಣ್ಣೆಮ್ಮ ಅವರ ನಿಧನಕ್ಕೆ ವಿವಿಧ ಮಠಾಧೀಶರು, ರಾಜಕೀಯ ಪ್ರಮುಖರು ಹಾಗೂ ಊರಿನ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka